ಸಂಪುಟ : ೯ ಸಂಚಿಕೆ ೫೫ ಪುಟ : ೪ ಬೆಲೆ: ೩.೦೦ ಶುಕ್ರವಾರ ಮಾರ್ಚ್ 29 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

**WALK IN INTERVIEW**

Vacancy open

Bagalkot , Bijapur , Bidar , Kalaburgi, Mangalore , Belgaum

(Required For Bank Recovery and Collections)

- Filed collection Executive
- Two wheeler Must
- Salary up to 15000/- & Attractive Incentives Facility

Contact Number : 8310034934

Volume : 9 Issue : 55 Pages : 4 Price : 3.00 Friday March 29 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 29ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆಯಾಗಲಿದೆ.

ಸ್ಥಳಗಳ ವಿವರ: ವಾರ್ಡ್ ನಂ-21, 22ರಲ್ಲಿ ವಿಜಯನಗರ ಶಾಲೆ, ವಾಲ್ಮೀಕಿ ಭವನ, ಟವರ್ ಕಂಬ, ಶಿಗ್ಗಾವಿ ಲೇಔಟ್, ಕರುಗಲ್ ಲೇಔಟ್, ಮಾರುತಿ ಗುಡಿ ಲೈನ್, ವಾರ್ಡ್ ನಂ.1ರ ಎಲ್ಲ ಭಾಗಗಳು, ವಾರ್ಡ್ ನಂ.11ರಲ್ಲಿ ನಿಸರ್ಗ ಬಡಾವಣೆ, ಅಬ್ದುಲ್ ಕಲಾಂ ಲೈನ್, ಶಿವಬಸವ ನಗರ ರಿಂಗ್ ರಸ್ತೆಯ ಕೆಲವು ಉಳಿದ ಭಾಗಗಳು,

ವಾರ್ಡ್ ನಂ.31, 32ರಲ್ಲಿ ರಂಗನವಾಡ, ಹಸಿರುಕೇರಿ ದಿಬ್ಬದ ಭಾಗ 1, 2, 1 ನಂಬರ್ ಶಾಲೆ, ದೇಶಪಾಂಡೆ ಅವರ ಲೈನ್, ಗುಡದೂರ್ ಲೈನ್, ಜಿಗಿಜಿಗಿ ಅವರ ಲೈನ್, ಜವಳಗಲ್ಲಿ ಲೈನ್, ಮಾಬುಸುಬಾನಿ ಕಟ್ಟಿ, ಉಳಿದ ಕೆಲವು ಭಾಗಗಳು, ವಾರ್ಡ್ ನಂ. 34, 35ರಲ್ಲಿ 1ನೇ ಕ್ರಾಸ್, ಹೂಗಾರ್ ಪ್ಲಾಟ್, ಡಿಪೋ ಹಿಂದಿನ ಭಾಗ, ಆದರ್ಶ ನಗರ 2ನೇ ಕ್ರಾಸ್, 3ನೇ ಕ್ರಾಸ್, ಬಸವೇಶ್ವರ ಶಾಲೆ ಗಾರ್ಡನ್ ಲೈನ್, ಸಚ್ಚಿದಾನಂದ ಮಠದ ರಸ್ತೆ, ಮಾರುತಿ ದೇವರ ಗುಡಿ ಲೈನ್, ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭದ್ರಾ ಜಲಾಶಯದಿಂದ ನೀರು ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿನಲ್ಲಿ ಭದ್ರಾ ಜಲಾಶಯದಿಂದ ಬೃಹತ್/ಮಧ್ಯಮ ನೀರಾವರಿ ಜಲಾಶಯಗಳಲ್ಲಿರುವ ನೀರನ್ನು ಬೇಸಿಗೆ ಅವಧಿಯಲ್ಲಿ ಕುಡಿಯುವ ನೀರಿನ ಅಭಾವವಿರುವುದರಿಂದ ವಿವಿಧ ಕುಡಿಯುವ ನೀರಿನ ಯೋಜನೆಗಳಿಗೆ ಭದ್ರಾನದಿಯ ಮೂಲಕ ಮಾರ್ಚ್ 29 ರಿಂದ ಎಪ್ರಿಲ್ 6 ರವರೆಗೆ ಈ ಕೆಳಕಂಡಂತೆ ನೀರು ಹರಿಸಲಾಗುವುದು.

ಮಾರ್ಚ್ 30ರಿಂದ ಎಪ್ರಿಲ್ 5 ರವರೆಗೆ ಪ್ರತಿದಿನ 3000 ಕ್ಯೂಸೆಕ್ಸ್ ನೀರು ಹಾಗೂ ಎಪ್ರಿಲ್ 6 ರ ರಾತ್ರಿಯವರೆಗೆ 2200 ಕ್ಯೂಸೆಕ್ಸ್ ನೀರು ಹರಿಸಲಾಗುವುದು.

ನದಿ ಪಾತ್ರದಲ್ಲಿ ಜನರು ಮೇಲ್ಕಂಡ ದಿನಾಂಕಗಳಂದು ತಿರುಗಾಡುವುದಾಗಲೀ, ದನಕರುಗಳನ್ನು ನದಿಗೆ ಇಳಿಸುವುದಾಗಲಿ ಇತ್ಯಾದಿ ಚಟುವಟಿಕೆಗಾಗಿ ನದಿಗೆ ಇಳಿಯದಂತೆ ಎಚ್ಚರಿಕೆ ನೀಡಲಾಗಿದೆ. ಮೇಲ್ಕಾಣಿಸಿದ ಅವಧಿಯಲ್ಲಿ ರೈತ ಬಾಂಧವರು ನದಿ ದಂಡೆಯಲ್ಲಿ ಅನಧಿಕೃತವಾಗಿ ಅಳವಡಿಸಿರುವ ಪಂಪ್‌ಸೆಟ್‌ಗಳಿಂದ ನೀರೆತ್ತುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಕರ್ನಾಟಕ ನೀರಾವರಿ ನಿಗಮ ನಿಯಮಿತದ ಪ್ರಕಟಣೆ ತಿಳಿಸಿದೆ.

## ಶ್ರೀ ಶರಣಬಸವೇಶ್ವರರ ಜಾತ್ರಾ ಮಹೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಸುಕ್ಷೇತ್ರ ಕುರ್ತಕೋಟಿ ಗ್ರಾಮದಲ್ಲಿ ಮಹಾದಾಸೋಹಿ ಕಲಬುರಗಿ ಶ್ರೀ ಶರಣಬಸವೇಶ್ವರ ಜೀವನ ದರ್ಶನದ 30ನೇ ವರ್ಷದ ಪುರಾಣ ಪ್ರವಚನ ಹಾಗೂ 24ನೇ ವರ್ಷದ ಜಾತ್ರಾಮಹೋತ್ಸವದ ಅಂಗವಾಗಿ ಶ್ರೀಮದ್ ಉಜ್ಜಯಿನಿ ಸದ್ಧರ್ಮ ಸಿಂಹಾಸನಾಧೀಶ್ವರ ಶ್ರೀ ಜಗದ್ಗುರು ರಾಜದೇಶಿಕೇಂದ್ರ ಶಿವಾಚಾರ್ಯ ಮಹಾಭಗವತ್ಪಾದಂಗಳವರ ಅಡ್ಡಪಲ್ಲಕ್ಕಿ ಮಹೋತ್ಸವ ಕಾರ್ಯಕ್ರಮದ ಅಂಗವಾಗಿ ಮಾ.29ರ ಸಾಯಂಕಾಲ 5 ಗಂಟೆಗೆ ಕುಂಭ, ಕಳಸ, ಕನ್ನಡಿ, ಡೊಳ್ಳು, ಭಜನೆ, ಸಕಲ ವಾದ್ಯ ವೈಭವಗಳೊಂದಿಗೆ ಮೆರವಣಿಗೆ, ಧರ್ಮಸಭೆ ಜರುಗುವುದು.

ನೇತೃತ್ವವನ್ನು ಶ್ರೀ ಷ.ಬ್ರ. ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಬೃಹನ್ಮಠ ಅಡ್ನೂರು-ರಾಜೂರು-ಗದಗ ವಹಿಸುವರು. ಸಮ್ಮುಖವನ್ನು ಶ್ರೀ ಷ.ಬ್ರ. ಫಕೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಓಂಕಾರೇಶ್ವರ ಹಿರೇಮಠ, ಓಂಕಾರಗಿರಿ, ಸೊರಟೂರ ವಹಿಸುವರು. ಈ ಎಲ್ಲ ಕಾರ್ಯಕ್ರಮಗಳಲ್ಲಿ ಸದ್ಭಕ್ತರು ಪಾಲ್ಗೊಂಡು ಗುರುಗಳ ಕೃಪೆಗೆ ಪಾತ್ರರಾಗಬೇಕೆಂದು ಕಮಿಟಿಯವರು ವಿನಂತಿಸಿದ್ದಾರೆ.

### ಆಟಕ್ಕಿದ್ದೂ ಲೆಕ್ಕಕ್ಕಿಲ್ಲದಂತಾದ ಶಿರಹಟ್ಟಿಯ ಕೃಷಿ ಉತ್ಪನ್ನ ಉಪ ಮಾರುಕಟ್ಟೆ ಮಳಿಗೆ

# ಮಳಿಗೆಗಳ ಹರಾಜು ಯಾವಾಗ?

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪಟ್ಟಣದ ಹೃದಯ ಭಾಗದಲ್ಲಿರುವ ಕೃಷಿ ಉತ್ಪನ್ನ ಉಪ ಮಾರುಕಟ್ಟೆ ಸಮಿತಿಯ ಜಾಗೆಯಲ್ಲಿ ಕೃಷಿ ಮಾರಾಟ ಇಲಾಖೆ ವತಿಯಿಂದ 10 ಮಳಿಗೆಗಳನ್ನು ನಿರ್ಮಾಣ ಮಾಡಿ ಕೆಲವು ತಿಂಗಳುಗಳೇ ಕಳೆದರೂ ಸಹ ಇಲ್ಲಿಯವರೆಗೂ ಹರಾಜು ಆಗದೇ ಹಾಗೆಯೇ ಉಳಿದಿದ್ದು, ಇದೀಗ ಮಳಿಗೆಗಳ ಹರಾಜು ಯಾವಾಗ ಎಂದು ಪಟ್ಟಣದ ಜನತೆ ಕಾಯುತ್ತಿದ್ದಾರೆ.

ಶಿರಹಟ್ಟಿಯ ಕೃಷಿ ಉತ್ಪನ್ನ ಉಪ ಮಾರುಕಟ್ಟೆಯ ಬೆಳ್ಳಟ್ಟಿ ರಸ್ತೆಗೆ ಹೊಂದಿಕೊಂಡಿರುವ ಕೋಟ್ಯಂತರ ರೂ ಬೆಲೆ ಬಾಳುವ ಜಾಗೆಯಲ್ಲಿ ಇಲಾಖೆಯು 2022-23ನೇ ಸಾಲಿನ ವಾರ್ಷಿಕ ಕ್ರಿಯಾ ಯೋಜನೆ ಅಡಿಯಲ್ಲಿ 44 ಲಕ್ಷ ರೂ ವೆಚ್ಚದಲ್ಲಿ 10 ಮಳಿಗೆಗಳನ್ನು ನಿರ್ಮಿಸಿದೆ. ಮಳಿಗೆಗಳು ನಿರ್ಮಾಣಗೊಂಡಿದ್ದರೂ ಸಹ ಇವುಗಳ ಹರಾಜು ಪ್ರಕ್ರಿಯೆ ಇದುವರೆಗೂ ನಡೆದಿಲ್ಲ.

ಶಿರಹಟ್ಟಿ ಮತಕ್ಷೇತ್ರದ ಕೇಂದ್ರಸ್ಥಳವಾಗಿದ್ದರೂ ಸಹ ಇಲ್ಲಿರುವ ಕೃಷಿ ಉತ್ಪನ್ನ ಉಪ ಮಾರುಕಟ್ಟೆ ಕೇವಲ ಹೆಸರಿಗಷ್ಟೇ ಸಿಮೀತವಾದಂತೆ ಕಾಣುತ್ತಿದೆ. ಏಕೆಂದರೆ ಇಲ್ಲಿಯ




ಉಪ ಮಾರುಕಟ್ಟೆಯಲ್ಲಿ 2 ಬೃಹತ್ ಗೋಡೌನ್‌ಗಳಿದ್ದು, ಇವುಗಳನ್ನು ಸಹ ಕೇಳುವವರಿಲ್ಲದಂತಾಗಿದೆ. ಇಲ್ಲಿ ವ್ಯಾಪಾರ ಮಾಡುವುದಕ್ಕೆ ವ್ಯಾಪಾರಸ್ಥರು ಮುಂದೆ ಬರುತ್ತಿಲ್ಲ, ವಿಶಾಲವಾದ ಜಾಗೆ ಇದ್ದರೂ ಸಹ ಅಲ್ಲಲ್ಲಿ ಗಿಡಗಂಟಿಗಳು ಬೆಳೆದು ರೈತರಿಗೆ ವರದಾನವಾಗಬೇಕಿದ್ದ ಮಾರುಕಟ್ಟೆ ಬಿಕೋ ಎನ್ನುತ್ತಿದೆ.

ಶಿರಹಟ್ಟಿಯಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆಯ ಉಪ ಮಾರುಕಟ್ಟೆ ಮಾತ್ರ ಇದ್ದು, ಇದು ಸುತ್ತಮುತ್ತಲಿನ ರೈತರಿಗೆ ಅನುಕೂಲವಾಗಬೇಕಿತ್ತು. ಆದರೆ ಈ ಭಾಗದಲ್ಲಿಯ ಜನಪ್ರತಿನಿಧಿಗಳ ಇಚ್ಛಾಶಕ್ತಿ ಕೊರತೆಯಿಂದ ಉಪ ಮಾರುಕಟ್ಟೆಯನ್ನು ಮೇಲ್ದರ್ಜೆಗೇರಿಸುವ ಪ್ರಯತ್ನಕ್ಕೆ ಯಾರೂ ಕೈ ಹಾಕಿದಂತೆ ಕಾಣುತ್ತಿಲ್ಲ. ಜೊತೆಗೆ ಇಲ್ಲಿ ವ್ಯಾಪಾರ ಮಾಡುವುದಕ್ಕೆ ಯಾವ ವ್ಯಾಪಾರಸ್ಥರು ಕೂಡಾ ಮುಂದೆ ಬರದೇ ಇರುವದರಿಂದ ತಾಲೂಕಿನ ರೈತರು ಮಾರುಕಟ್ಟೆಗೆ ಬೇರೆ ಬೇರೆ ಕಡೆ ತೆರಳುತ್ತಿದ್ದಾರೆ. ಹೀಗಾಗಿ ಕೃಷಿ ಉತ್ಪನ್ನ ಮಾರುಕಟ್ಟೆ ಇಲ್ಲದೇ ಇರುವದು ತಾಲೂಕಿನ ಅಭಿವೃದ್ಧಿಗೂ ಸಹ ಹಿನ್ನಡೆಯಾಗಿದೆ.

ಸದ್ಯ ಶಿರಹಟ್ಟಿ ಪಟ್ಟಣದಲ್ಲಿರುವ ಉಪ ಮಾರುಕಟ್ಟೆಯನ್ನು ಮೇಲ್ದರ್ಜೆಗೇರಿಸಿ, ಈ ಜಾಗೆಯನ್ನು ಸದ್ಬಳಕೆಯನ್ನು ಮಾಡಿಕೊಂಡು ರೈತರಿಗೆ ಮತ್ತು ಇಲ್ಲಿಯ ವ್ಯಾಪಾರಸ್ಥರಿಗೆ ಎಲ್ಲ ಅಗತ್ಯ ಮೂಲಸೌಲಭ್ಯಗಳನ್ನು ಕಲ್ಪಿಸುವುದಕ್ಕಾಗಿ ಉಪ ಮಾರುಕಟ್ಟೆಯನ್ನು ಮೇಲ್ದರ್ಜೆಗೇರಿಸಿ ಈ ಭಾಗದ ಅಭಿವೃದ್ಧಿಗೆ ಇನ್ನಷ್ಟು ಪ್ರಯತ್ನಗಳು ಈ ಭಾಗದ ಚುನಾಯಿತ ಜನಪ್ರತಿನಿಧಿಗಳು ಮತ್ತು ಸಂಬಂಧಿಸಿದ ಇಲಾಖಾ ಅಧಿಕಾರಿಗಳಿಂದ ಆಗಬೇಕಿದೆ ಎಂದು ತಾಲೂಕಿನ ಪ್ರಜ್ಞಾವಂತ ನಾಗರಿಕರು ಒತ್ತಾಯಿಸುತ್ತಿದ್ದಾರೆ.

> ಈ ಕುರಿತು ಪ್ರತಿಕ್ರಿಯಿಸಿದ ತಾಲೂಕಾ ಕರವೇ ಅಧ್ಯಕ್ಷ ಬಸವರಾಜ ವಡವಿ, ಮಳಿಗೆ ನಿರ್ಮಾಣವಾಗಿದ್ದರೂ ಸಹ ಅವುಗಳನ್ನು ಹರಾಜು ಮಾಡುವಲ್ಲಿ ಅಧಿಕಾರಿಗಳು ವಿಫಲರಾಗಿದ್ದಾರೆ. ಸರಕಾರದ ಅನುದಾನ ಸದ್ವಿನಿಯೋಗವಾಗಬೇಕು. ಈ ನಿಟ್ಟಿನಲ್ಲಿ ಪಾರದರ್ಶಕತೆಯಿಂದ ಹರಾಜು ಪ್ರಕ್ರಿಯೆ ಮಾಡಿ, ಶಿರಹಟ್ಟಿ ಉಪ ಮಾರುಕಟ್ಟೆಯನ್ನು ಮೇಲ್ದರ್ಜೆಗೇರಿಸಬೇಕೆಂದು ಹೇಳಿದರು.

ಈ ಕುರಿತು ಪ್ರತಿಕ್ರಿಯಿಸಿದ ಲಕ್ಷ್ಮೇಶ್ವರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿ ಶಿವಾನಂದ ಮಠ, ಚುನಾವಣಾ ನೀತಿ ಸಂಹಿತೆ ಮುಗಿದ ನಂತರ ಟೆಂಡರ್ ಕಮ್ ಬಹಿರಂಗ ಹರಾಜು ಪ್ರಕ್ರಿಯೆ ಪ್ರಾರಂಭಿಸಲಾಗುವುದು ಎಂದರು.

### ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಆನಂದಸ್ವಾಮಿ ಗಡ್ಡದೇವರಮಠ

# ಕಾಂಗ್ರೆಸ್‌ಗೆ ಉತ್ತಮ ವಾತಾವರಣವಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಈ ಬಾರಿ ಅತೀ ಹೆಚ್ಚು ಮತಗಳಿಂದ ಗೆಲ್ಲುವ ವಿಶ್ವಾಸ ನನಗಿದೆ ಎಂದು ಹಾವೇರಿ-ಗದಗ ಲೋಕಸಭೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಹೇಳಿದರು.

ಅವರು ಪಟ್ಟಣದ ದಿ. ಆರ್.ಎನ್. ದೇಶಪಾಂಡೆ ಅವರ ವಾಡೆಯಲ್ಲಿ ಜರುಗಿದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿ, ರಾಜ್ಯ ಸರಕಾರ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಗಳು ಸಂಪೂರ್ಣವಾಗಿ ಬಡವರ ಬದುಕು ಸುಧರಣೆ ಮಾಡುವಲ್ಲಿ ಯಶಸ್ವಿಯಾಗಿದ್ದು, ಮಹಿಳೆಯರು ನೆಮ್ಮದಿಯಿಂದ ಜೀವನ ಮಾಡಲು ಸಹಕಾರಿಯಾಗಿವೆ. ಹಾವೇರಿ ಮತ್ತು ಗದಗ ಭಾಗದಲ್ಲಿ ನಾನು ಸಂಚಾರ ಮಾಡಿದ್ದು, ಕೇಂದ್ರ ಸರಕಾರ ಸುಳ್ಳು ಭರವಸೆ ನೀಡಿ ನಮಗೆ ಮೋಸ ಮಾಡಿದ್ದಾರೆ. ಈ ಬಾರಿ ಕಾಂಗ್ರೆಸ್ ಪಕ್ಷ ಕೇಂದ್ರದಲ್ಲಿ ಅಧಿಕಾರದ ಚುಕ್ಕಾಣಿ ಹಿಡಿಯಲು ಉತ್ತಮ ವಾತಾವರಣ ಸೃಷ್ಟಿಯಾಗಿದೆ ಎಂದರು.



ಸಚಿವ ಎಚ್.ಕೆ. ಪಾಟೀಲ್ ಮಾತನಾಡಿ, ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ದೇಶದ ರೈತರ ಆದಾಯ ದುಪ್ಪಟ್ಟು, ಪ್ರತಿಯೊಬ್ಬರ ಖಾತೆಗೆ 15 ಲಕ್ಷ ರೂ, 2 ಕೋಟಿ ಯುವಕರಿಗೆ ಉದ್ಯೋಗ ಸೃಷ್ಟಿಸುವುದಾಗಿ ಸುಳ್ಳು ಭರವಸೆಗಳನ್ನು ನೀಡಿ ಅಧಿಕಾರದ ಚುಕ್ಕಾಣಿ ಹಿಡಿದಿದ್ದು, ಯಾವ ಭರವಸೆಗಳನ್ನೂ ಇಂದಿಗೂ ಈಡೇರಿಸದೇ ಮೋಸ ಮಾಡಿದ್ದಾರೆ. ಇದರಿಂದ ಬಿಜೆಪಿ ಸರಕಾರದ ಬಗ್ಗೆ ಜನರಲ್ಲಿ ನಂಬಿಕೆ, ವಿಶ್ವಾಸ ಹೊರಟು ಹೋಗಿದ್ದು ರಾಜ್ಯದಲ್ಲಿ 20ಕ್ಕಿಂತ ಹೆಚ್ಚು ಕಾಂಗ್ರೆಸ್ ಅಭ್ಯರ್ಥಿಗಳ ಆಯ್ಕೆ ಖಚಿತವಾಗಿದೆ. ಹಾವೇರಿ-ಗದಗ ಲೋಕಸಭೆಯ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅತೀ ಹೆಚ್ಚು ಮತಗಳ ಅಂತರದಿಂದ ಆಯ್ಕೆಯಾಗುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಶಿರಹಟ್ಟಿ ಮಾಜಿ ಶಾಸಕ ರಾಮಣ್ಣ ಲಮಾಣಿ, ಜಿ.ಎಸ್. ಗಡ್ಡದೇವರಮಠ, ಬಿ.ವಿ. ಸುಂಕಾಪೂರ, ಎಸ್.ಎಂ. ನೀಲಗುಂದ, ಎಂ.ಡಿ. ಬಟ್ಟೂರ, ಬಿ.ಎಂ. ಹರಪನಹಳ್ಳಿ, ಪ.ಪಂ ಸದಸ್ಯ ನಾಗರಾಜ ದೇಶಪಾಂಡೆ, ಎಸ್.ಸಿ. ಬಡ್ನಿ, ಕೆ.ಎಲ್. ಕರಿಗೌಡರ, ವಿಜಯ ನೀಲಗುಂದ, ಉಮಾ ಮಟ್ಟಿ, ಚಂಪಾವತಿ ಗುಳೇದ, ಇಮಾಮಸಾಬ ಶೇಖ, ಮಾಹಾದೇವಪ್ಪ ಗಡಾದ, ದಾವೂದ ಜಮಾಲ ಸೇರಿದಂತೆ ಪಟ್ಟಣದ ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

> ಮಾಜಿ ಶಾಸಕ ಡಿ.ಆರ್. ಪಾಟೀಲ್ ಮಾತನಾಡಿ, ಮುಳಗುಂದ ಪಟ್ಟಣ 50 ವರ್ಷಗಳಿಂದಲೂ ಕಾಂಗ್ರೆಸ್ ಭದ್ರ ಕೋಟೆಯಾಗಿದ್ದು, ಈ ಬಾರಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರನ್ನು ಆಯ್ಕೆ ಮಾಡಿ ನಿಮ್ಮ ಸೇವೆ ಮಾಡಲು ಅವಕಾಶ ನೀಡಿ ಎಂದರು.

### ಕಾಯಕ ಬಂಧುಗಳ ಸಭೆಯಲ್ಲಿ ಸಹಾಯಕ ನಿರ್ದೇಶಕ ಶಿವಯೋಗಿ ರಿತ್ತಿ

# ನರೇಗಾದಿಂದ ಬದುಕು ಸದೃಢ

■ವಿಜಯಸಾಕ್ಷಿ ಸುದ್ದಿ, ರೋಣ

ನರೇಗಾ ಯೋಜನೆಯು ಬೇಸಿಗೆಯ ದಿನಗಳಲ್ಲಿ ಬಡವರಿಗೆ ಅಸರೆಯಾಗುವುದರ ಜೊತೆಗೆ ಬದುಕನ್ನು ಕಟ್ಟಿಕೊಡುತ್ತದೆ. ಈ ಹಿನ್ನೆಲೆಯಲ್ಲಿ ನೀವೆಲ್ಲರೂ ಪ್ರಾಮಾಣಿಕತೆಯಿಂದ ಕೆಲಸ ಮಾಡಿದರೆ ಬಡವರು ಕೂಲಿ ಕೆಲಸ ಮಾಡಿ ತಮ್ಮ ಕುಟುಂಬವನ್ನು ಸದೃಢಪಡಿಸಕೊಳ್ಳಬಹುದು ಎಂದು ಸಹಾಯಕ ನಿರ್ದೇಶಕ (ಪಂ.ರಾ) ಶಿವಯೋಗಿ ರಿತ್ತಿ ಅಭಿಪ್ರಾಯಪಟ್ಟರು.



ತಾಲೂಕಿನ ಜಕ್ಕಲಿ ಗ್ರಾಮ ಪಂಚಾಯಿತಿಯಲ್ಲಿ ಗುರುವಾರ ನಡೆದ ಕಾಯಕ ಬಂಧುಗಳ ಸಭೆಯಲ್ಲಿ ಮಾತನಾಡಿದ ಅವರು, ಕಾಯಕ ಬಂಧುಗಳು ಕರ್ತವ್ಯ ಹಾಗೂ ಹಕ್ಕುಗಳನ್ನು ಪ್ರತಿಯೊಬ್ಬರೂ ಪಾಲನೆ ಮಾಡಬೇಕು. ಪ್ರತಿಯೊಂದು ಕೂಲಿಕಾರರ ಗುಂಪಿನಲ್ಲಿ ನಿಮ್ಮನ್ನು ಕಾಯಕ ಬಂಧು ಎಂದೇ ಗುರುತಿಸಲಾಗುತ್ತದೆ. ಕಾಯಕ ಬಂಧುಗಳು ಕೆಲಸದ ಬೇಡಿಕೆಯನ್ನು ನಮೂನೆ-6ರ ಮೂಲಕ ಗ್ರಾಮ ಪಂಚಾಯಿತಿಗೆ ಸಲ್ಲಿಸಬೇಕು. 15 ದಿನಗಳೊಳಗೆ ಕೆಲಸ ದೊರಕುವಂತೆ ಮಾಡಬೇಕು ಮತ್ತು ಕೆಲಸದ ಸ್ಥಳದಲ್ಲಿ ಮಾರ್ಕಿಂಗ್ ಮಾಡಿ ಕೂಲಿಕಾರರಿಗೆ ಮಾಹಿತಿ ನೀಡಬೇಕು.

ಏಪ್ರಿಲ್ 1ರಿಂದ ತಾಲೂಕಿನ ಎಲ್ಲಾ ಗ್ರಾ.ಪಂ.ಗಳಲ್ಲಿ ನರೇಗಾ ಕೆಲಸ ಆರಂಭವಾಗಲಿದ್ದು, ಜಕ್ಕಲಿ ಗ್ರಾಮ ಪಂಚಾಯಿತಿಯಲ್ಲಿಯೂ ಕೆಲಸ ಆರಂಭವಾಗುತ್ತದೆ. ಹಾಗಾಗಿ ತಾವೆಲ್ಲರೂ ನರೇಗಾ ಕೆಲಸಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರನ್ನು ಸೇರಿಸುವ ಕೆಲಸ ಮಾಡಬೇಕು ಎಂದರು.

ನರೇಗಾ ಕೂಲಿಕಾರರಿಗೆ ಕೂಲಿ ಪರಿಷ್ಕರಣೆಯಾಗಿದ್ದು, ದಿನವೊಂದಕ್ಕೆ ಕೂಲಿ ಮೊತ್ತವನ್ನು 349 ರೂಪಾಯಿಗೆ ಹೆಚ್ಚಿಸಲಾಗಿದೆ. ಆದ್ದರಿಂದ ಕೂಲಿಕಾರರು ನರೇಗಾ ಯೋಜನೆಯಿಂದ ಬರುವ ಹಣವನ್ನು ಮುಂಗಾರಿನ ಕೃಷಿ ಬಿತ್ತನೆಯ ಕಾರ್ಯಕ್ಕೆ ಬಳಸಿಕೊಳ್ಳಲು ನೆರವಾಗುವುದು ಎಂದು ತಿಳಿಸಿದರು. ಜಕ್ಕಲಿ ಗ್ರಾಮ ಪಂಚಾಯಿತಿ ಃಈಖಿ, ಉಪಿಓ ಕಾಯಕ ಬಂಧುಗಳು, ನರೇಗಾ ಹಾಗೂ ಗ್ರಾ.ಪಂ ಸಿಬ್ಬಂದಿ ವರ್ಗದವರು ಹಾಜರಿದ್ದರು.

> ಕೆಲಸದ ಸ್ಥಳದಲ್ಲಿ ಕೂಲಿಕಾರರಿಗೆ ನೆರಳು, ಕುಡಿಯುವ ನೀರು, ಪ್ರಥಮ ಚಿಕಿತ್ಸೆ ಮುಂತಾದ ಸೌಲಭ್ಯವಿರುವಂತೆ ನೋಡಿಕೊಳ್ಳಬೇಕು. ಕಾಯಕ ಬಂಧುಗಳು ಅರೆಕುಶಲ ಕಾರ್ಮಿಕರೆಂದು ನರೇಗಾ ತಂತ್ರಾಂಶದಲ್ಲಿ ನೋಂದಣಿ ಮಾಡಿಕೊಳ್ಳಬೇಕು. ಕೂಲಿಕಾರರ ಜಾಬ್ ಕಾರ್ಡ್‌ಗಳಲ್ಲಿ ವಿವರ ನಮೂದಿಸಬೇಕೆಂದು ಶಿವಯೋಗಿ ರಿತ್ತಿ ಹೇಳಿದರು.

## ದಾಖಲೆ ರಹಿತ 5 ಲಕ್ಷ ರೂ ನಗದು ವಶಕ್ಕೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸೂಕ್ತ ದಾಖಲೆ ಇಲ್ಲದೇ ಸರಕಾರಿ ಬಸ್‌ನಲ್ಲಿ ಸಾಗಿಸುತ್ತಿದ್ದ 5 ಲಕ್ಷ ರೂ ಹಣವನ್ನು ತಾಲೂಕಿನ ರಾಮಗೇರಿ ಚೆಕ್‌ಪೋಸ್ಟ್‌ನಲ್ಲಿ ಗುರುವಾರ ಚುನಾವಣಾಧಿಕಾರಿಗಳು ವಶಪಡಿಸಿಕೊಂಡಿದ್ದಾರೆ.

ಹುಬ್ಬಳ್ಳಿಯಿಂದ ಲಕ್ಷ್ಮೇಶ್ವರ ಕಡೆ ಬರುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ತಪಾಸಣೆ ವೇಳೆ 5 ಲಕ್ಷ ರೂ ಹಣವನ್ನು ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ.

ಧಾರವಾಡ ಜಿಲ್ಲೆಯ ಮುಗದ ಗ್ರಾಮದ ಸಯ್ಯದ ಅಬ್ದುಲ್‌ರಜಾಕ್ ಪೀರಜಾಧೆ ಎಂಬುವರು ಸೂಕ್ತ ದಾಖಲೆ ಇಲ್ಲದೇ ಹಣ ಸಾಗಿಸುತ್ತಿದ್ದರು. ಈ ವೇಳೆ ತಹಸೀಲ್ದಾರ, ವಾಸುದೇವ ಸ್ವಾಮಿ, ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ಈರಪ್ಪ ರಿತ್ತಿ, ವಿನಾಯಕ ವೇತಾಳ, ಮಾರುತಿ ರಾಠೋಡ ಸೇರಿ ಪೊಲೀಸ್, ಕಂದಾಯ ಸಿಬ್ಬಂದಿಗಳು ಇದ್ದರು. ಪ್ರತ್ಯೇಕ ಪ್ರಕರಣದಲ್ಲಿ 7 ಲೀಟರ್ ಮದ್ಯವನ್ನು ವಶಪಡಿಸಿಕೊಂಡಿದ್ದಾರೆ. ಈ ಕುರಿತು ಲಕ್ಷ್ಮೇಶ್ವರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಳಪೆ ಶಿಕ್ಷಣ, ಉದ್ಯೋಗಿಗಳ ಕೌಶಲ್ಯಗಳನ್ನು ಮೊದಲು ಸುಧಾರಿಸಬೇಕು: ರಘುರಾಮ್ ರಾಜನ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಆರ್‌ಬಿಐನ ಮಾಜಿ ಗವರ್ನರ್ ರಘುರಾಮ್ ರಾಜನ್ ಅವರು ಭಾರತದ ಆರ್ಥಿಕ ಬೆಳವಣಿಗೆಯ ಕುರಿತು ತಮ್ಮ ಹೇಳಿಕೆಗಳಿಗಾಗಿ ಟೀಕೆಗೆ ಗುರಿಯಾಗಿದ್ದಾರೆ. 'ದೇಶದ ಗಮನಾರ್ಹ ರಚನಾತ್ಮಕ ಸಮಸ್ಯೆಗಳನ್ನು ಸರಿಪಡಿಸಬೇಕಾಗಿದೆ. ಭಾರತವು ತನ್ನ ಬಲವಾದ ಆರ್ಥಿಕ ಬೆಳವಣಿಗೆಯ ಸುತ್ತಲಿನ "ಹೈಪ್" ಅನ್ನು ನಂಬುವ ದೊಡ್ಡ ತಪ್ಪನ್ನು ಮಾಡುತ್ತಿದೆ.

ಅದನ್ನು ನಿಜಗೊಳಿಸಲು ಹಲವು ವರ್ಷಗಳ ಕಠಿಣ ಪರಿಶ್ರಮ ಇನ್ನೂ ಉಳಿದಿದೆ' ಎಂದು ಅವರು ಬ್ಲೂಮ್‌ಬರ್ಗ್‌ಗೆ ನೀಡಿದ ಸಂದರ್ಶನದಲ್ಲಿ ಹೇಳಿದ್ದಾರೆ. ಭಾರತವು ತನ್ನ ನಿಜವಾದ ಸಾಮರ್ಥ್ಯವನ್ನು ಪೂರೈಸಲು ಕಳಪೆ ಶಿಕ್ಷಣ ಮತ್ತು ಉದ್ಯೋಗಿಗಳ ಕೌಶಲ್ಯ ಸೇರಿದಂತೆ ತನ್ನ ರಚನಾತ್ಮಕ ಸಮಸ್ಯೆಗಳನ್ನು ಮೊದಲು ಸುಧಾರಿಸಬೇಕಾಗಿದೆ.

## ಎಎಪಿ ಪ್ರತಿಭಟನೆ ವೇಳೆ ಪತ್ರಕರ್ತರ ಮೇಲೆ ಪೊಲೀಸರಿಂದ ಹಲ್ಲೆ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಬಂಧನವನ್ನು ಖಂಡಿಸಿ ಆಮ್ ಆದ್ಮಿ ಪಕ್ಷದ ವತಿಯಿಂದ ನಡೆಯುತ್ತಿದ್ದ ಪ್ರತಿಭಟನೆ ವೇಳೆ ವರದಿ ಮಾಡುತ್ತಿದ್ದ ಛಾಯಾಚಿತ್ರ ವರದಿಗಾರರ(ಫೋಟೋ ಜರ್ನಲಿಸ್ಟ್) ಮೇಲೆ ಪೊಲೀಸರು ಹಲ್ಲೆ ನಡೆಸಿರುವ ಘಟನೆ ಪಟೇಲ್ ಚೌಕ್‌ನಲ್ಲಿ ನಡೆದಿದ್ದು, ಪ್ರತಿಭಟನೆಯನ್ನು ಹೊರ ಜಗತ್ತಿಗೆ ಅರಿಯದಂತೆ ಮಾಡಲು ವ್ಯವಸ್ಥಿತ ಪಿತೂರಿ ನಡೆಸಿರುವ ಆರೋಪ ಕೇಳಿ ಬಂದಿದೆ.

ಪೊಲೀಸರ ಹಲ್ಲೆಯಿಂದ ಹಿಂದೂಸ್ತಾನ್ ಟೈಮ್ಸ್‌ನ ಛಾಯಾಚಿತ್ರ ವರದಿಗಾರ ಸಲ್ಮಾನ್ ಅಲಿ ಅವರ ಎಡ ಮೊಣಕೈ ಮೂಳೆ ಮುರಿತಕ್ಕೆ ಒಳಗಾಗಿದೆ ಎಂದು ತಿಳಿದು ಬಂದಿದೆ. ದಿ ವರ್ಕಿಂಗ್ ನ್ಯೂಸ್ ಕ್ಯಾಮರಾಮನ್ಸ್ ಅಸೋಸಿಯೇಷನ್ ಬಿಡುಗಡೆ ಮಾಡಿದ ಫೋಟೋದಲ್ಲಿ ಇಂಡಿಯಾ ಟುಡೆಯ ಅರುಣ್ ಠಾಕೂರ್ ಅವರ ಕತ್ತನ್ನು ಪೊಲೀಸ್ ಅಧಿಕಾರಿಯೋರ್ವರು ಹಿಡಿದಿರುವುದನ್ನು ತೋರಿಸಿದೆ.

ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿರುವ ಹಲವಾರು ಛಾಯಾಚಿತ್ರಗಳು ಮತ್ತು ವೀಡಿಯೊ ಕ್ಲಿಪ್‌ಗಳು ಕ್ಯಾಮೆರಾಗಳನ್ನು ಹೊತ್ತೊಯ್ಯುತ್ತಿರುವ ಪತ್ರಕರ್ತರಿಗೆ ಹಲವಾರು ಅಧಿಕಾರಿಗಳು ಬೆದರಿಕೆ ಹಾಕುತ್ತಿರುವುದನ್ನು ತೋರಿಸಿದೆ.

ಪ್ರೆಸ್ ಕ್ಲಬ್ ಆಫ್ ಇಂಡಿಯಾ ಹಲ್ಲೆಯನ್ನು ಖಂಡಿಸಿ ಹೇಳಿಕೆಯನ್ನು ನೀಡಿದ್ದು, ನಿವೃತ್ತ ನ್ಯಾಯಾಧೀಶರ ನೇತೃತ್ವದ ಉನ್ನತ ಮಟ್ಟದ ಸಮಿತಿಯಿಂದ ತನಿಖೆಗೆ ಒತ್ತಾಯಿಸಿದೆ. ಪತ್ರಕರ್ತರ ಮೇಲೆ ಹಲ್ಲೆ ಮಾಡಿದ ಪೊಲೀಸ್ ಸಿಬ್ಬಂದಿಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಬೇಕು. ರಾಜಕೀಯ ಪ್ರತಿಭಟನೆಗಳನ್ನು ವರದಿ ಮಾಡುವುದು ವರದಿಗಾರರು ಮತ್ತು ಫೋಟೋ ಜರ್ನಲಿಸ್ಟ್‌ಗಳ ಕೆಲಸ. ದೆಹಲಿ ಪೊಲೀಸರು ಫೋಟೊ ಜರ್ನಲಿಸ್ಟ್‌ಗಳಿಗೆ ತಮ್ಮ ಕೆಲಸಕ್ಕೆ ಅಡ್ಡಿಪಡಿಸಿ ಹಲ್ಲೆ ಮಾಡಿದ್ದಾರೆ. ಪತ್ರಿಕಾ ಸ್ವಾತಂತ್ರ್ಯವು ಮೂಲಭೂತ ಹಕ್ಕಾಗಿದೆ, ಇದನ್ನು ಸುಪ್ರೀಂ ಕೋರ್ಟ್ ಅನೇಕ ಸಂದರ್ಭಗಳಲ್ಲಿ ಒತ್ತಿ ಹೇಳಿದೆ ಎಂದು ಹೇಳಿದ್ದಾರೆ.

ದೆಹಲಿ ಮದ್ಯ ನೀತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದಿಂದ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಬಂಧನವನ್ನು ವಿರೋಧಿಸಿ ಎಎಪಿ ನಾಯಕರು ಮತ್ತು ಕಾರ್ಯಕರ್ತರು ಪ್ರತಿಭಟನೆ ನಡೆಸುತ್ತಿದ್ದರು.

### ನರೇಗಲ್ಲ ಬಸ್ ನಿಲ್ದಾಣಕ್ಕೆ ದಿಢೀರ್ ಭೇಟಿ ನೀಡಿದ ಸಾರಿಗೆ ವಿಭಾಗೀಯ ನಿಯಂತ್ರಕ ದೇವರಾಜ್

# ನಿಲ್ದಾಣವನ್ನು ಸ್ವಚ್ಛವಾಗಿಡಲು ಸಹಕರಿಸಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜಿಲ್ಲೆಯ ದೊಡ್ಡ ಬಸ್ ನಿಲ್ದಾಣವಾಗಿರುವ ನರೇಗಲ್ಲ ಬಸ್‌ನಿಲ್ದಾಣವು ಹಲವಾರು ಮೂಲಭೂತ ಸೌಲಭ್ಯಗಳ ಕೊರತೆಯಿಂದ ಬಳಲುತ್ತಿರುವುದನ್ನು ಮಾಧ್ಯಮದ ಪ್ರತಿನಿಧಿಗಳು ಮತ್ತು ಸಾರ್ವಜನಿಕರು ನಮ್ಮ ಗಮನಕ್ಕೆ ತಂದಿದ್ದಾರೆ. ಅವುಗಳಿಗೆ ಶೀಘ್ರವೇ ಕಾಯಕಲ್ಪ ನೀಡಲಾಗುವುದು ಎಂದು ಗದಗ ಜಿಲ್ಲಾ ಕರ್ನಾಟಕ ಸಾರಿಗೆ ಇಲಾಖೆಯ ವಿಭಾಗೀಯ ನಿಯಂತ್ರಕ ದೇವರಾಜ್ ಹೇಳಿದರು.

ಗುರುವಾರ ಬೆಳಿಗ್ಗೆ ನರೇಗಲ್ಲ ಬಸ್ ನಿಲ್ದಾಣಕ್ಕೆ ದಿಢೀರ್ ಭೇಟಿ ನೀಡಿದ ಅವರು, ಕಸವನ್ನು ಅಲ್ಲಲ್ಲೇ ಗುಂಪುಗೂಡಿಸಿ ಬೆಂಕಿ ಹಚ್ಚಿದ್ದನ್ನು ಕಂಡು ಕೆಂಡಾಮಂಡಲವಾದರು. ಇದರಿಂದ ಪ್ರಯಾಣಿಕರ ಆರೋಗ್ಯಕ್ಕೆ ಮಾರಕವಾಗುವುದೆಂದು ಸಾರಿಗೆ ನಿಯಂತ್ರಕರನ್ನು ಎಚ್ಚರಿಸಿದ ಅವರು, ಇನ್ನೆಂದಿಗೂ ಈ ರೀತಿ ಮಾಡಬೇಡಿ ಎಂದು ಹೇಳಿದರು.

ಶೌಚಾಲಯದ ವ್ಯವಸ್ಥೆಯನ್ನು ಖುದ್ದಾಗಿ ಪರಿಶೀಲಿಸಿದ ಡಿಸಿ, ಅಲ್ಲಿನ ಅವ್ಯವಸ್ಥೆಯ ಬಗ್ಗೆ ಶೌಚಾಲಯ ಸಿಬ್ಬಂದಿಗೆ ತಿಳಿಸಿ ಅದನ್ನು ಸರಿಪಡಿಸಲು ಹೇಳಿದರಲ್ಲದೆ, ಇಂಜಿನಿಯರ್ ಮಧು ಅವರಿಗೆ ಈ ಎಲ್ಲ ಕೆಲಸಗಳ ಕಡೆಗೆ ಹೆಚ್ಚಿನ ಗಮನ ನೀಡಬೇಕೆಂದು ಆದೇಶಿಸಿದರು.



ಮುಖಂಡ ನಿಂಗಪ್ಪ ಲಕ್ಕನಗೌಡ್ರ ಮಾತನಾಡಿ, ಈಗ ಕೆಲವು ದಿನಗಳಿಂದ ಗಜೇಂದ್ರಗಡ-ಗದಗ ತಡೆ ರಹಿತ ಬಸ್‌ನ್ನು ಓಡಿಸುತ್ತಿದ್ದಿರಿ. ಮಧ್ಯದಲ್ಲಿ ನರೇಗಲ್ಲ ಒಂದು ದೊಡ್ಡ ಊರಾಗಿದೆ. ಇಲ್ಲಿಗೆ ಒಂದು ನಿಲುಗಡೆ ನೀಡಿ ಬಸ್ ಓಡಿಸಿ ಎಂದು ಸಲಹೆ ನೀಡಿದರು. ಈ ಕುರಿತು ಗಜೇಂದ್ರಗಡ ಘಟಕ ವ್ಯವಸ್ಥಾಪಕರೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ದೇವರಾಜ ಹೇಳಿದರು.

> ಪ್ರಯಾಣಿಕರಿಗೆ ಎಲ್ಲ ಅನುಕೂಲತೆಯನ್ನು ಒದಗಿಸುವುದು ನಮ್ಮ ಇಲಾಖೆಯ ಮೊದಲ ಆದ್ಯತೆಯಾಗಿದೆ. ಅನುಕೂಲತೆ ಬಯಸುವ ಪ್ರಯಾಣಿಕರೂ ಸಹ ಬಸ್‌ನಿಲ್ದಾಣವನ್ನು ಸ್ವಚ್ಛವಾಗಿಟ್ಟುಕೊಳ್ಳುವಲ್ಲಿ ಇಲಾಖೆಯವರೊಂದಿಗೆ ಸಹಕರಿಸಬೇಕು. ನಳಗಳನ್ನು ಹಾಳುಗೆಡವಬಾರದು. ಎಲ್ಲೆಂದರಲ್ಲಿ ಕಸ ಬೀಸಾಡುವುದನ್ನು ಬಿಟ್ಟು, ನಿಗದಿತ ಜಾಗೆಯಲ್ಲಿ ಕಸ ಹಾಕಿ ನಿಮ್ಮೂರಿನ ಬಸ್ ನಿಲ್ದಾಣವನ್ನು ಸ್ವಚ್ಛವಾಗಿಟ್ಟುಕೊಳ್ಳಲು ಸಹಕರಿಸಿ. ಸಾರಿಗೆ ಸಿಬ್ಬಂದಿಗಳು ಪ್ರಯಾಣಿಕರೊಂದಿಗೆ, ಪ್ರಯಾಣಿಕರು ಸಿಬ್ಬಂದಿಗಳೊಂದಿಗೆ ಪರಸ್ಪರ ಸೌಜನ್ಯ ಮತ್ತು ಗೌರವದಿಂದ ವರ್ತಿಸಿದಾಗ ಮಾತ್ರ ಎಲ್ಲರೂ ನೆಮ್ಮದಿಯಿಂದ ಇರಲು ಸಾಧ್ಯ
>
> – ದೇವರಾಜ್.
>
> ವಿಭಾಗೀಯ ಸಾರಿಗೆ ನಿಯಂತ್ರಕ.

ಈ ಸಂದರ್ಭದಲ್ಲಿ ನರೇಗಲ್ಲ ಆಟೋ ಚಾಲಕರ ಸಂಘದ ಸದಸ್ಯರು ಅಧ್ಯಕ್ಷ ವಿಷ್ಣು ಜಕ್ಕಲಿಯವರ ನೇತೃತ್ವದಲ್ಲಿ ಬಸ್ ನಿಲ್ದಾಣದೊಳಗೆ ಒಂದು ಭಾಗದಲ್ಲಿ ನಮ್ಮ ಆಟೋಗಳನ್ನು ನಿಲ್ಲಿಸಲು ಆಟೋ ನಿಲ್ದಾಣದ ಅನುಕೂಲ ಮಾಡಿಕೊಡಬೇಕೆಂದು ಮನವಿ ಅರ್ಪಿಸಿದರು. ಈ ಸಂದರ್ಭದಲ್ಲಿ ಜಾಖೀರ ಬುಡ್ಡಾ ಗದಗ, ಹುಚ್ಚಪ್ಪ ಬೆಟಗೇರಿ, ಅಬ್ದುಲ್ ರೆಹೆಮಾನ್ ಲಕ್ಕುಂಡಿ, ಮಹಮ್ಮದ್ ನಶೇಖಾನ್, ಮಂಜುನಾಥ ರಾಠೋಡ, ಪ್ರಕಾಶ ಸಂಕನೂರ, ಹುಸೇನ್ ಅತ್ತಾರ, ರಾಮು ಮಣ್ಣೊಡ್ಡರ ಇನ್ನೂ ಮುಂತಾದವರಿದ್ದರು.

ಈಗ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಸೈಕಲ್, ಮೋಟರ್ ಸೈಕಲ್ ಮತ್ತು ಕಾರ್ ಸ್ಟ್ಯಾಂಡ್‌ಗಳಿಗೆ ಟೆಂಡರ್ ಕೆರಯಲು ಅವಕಾಶವಿಲ್ಲ. ನೀತಿ ಸಂಹಿತೆ ತೆರವಾದ ತಕ್ಷಣ ಇವುಗಳಿಗೆ ಟೆಂಡರ್ ಕರೆಯಲಾಗುವುದೆಂದು ಡಿಸಿ ದೇವರಾಜ್ ಉತ್ತರಿಸಿದರು.

ಪ್ರಯಾಣಿಕರಿಗೆ ಸೂಕ್ತ ಕುಡಿಯುವ ನೀರಿನ ವ್ಯವಸ್ಥೆ ಮಾಡಲು ಪ.ಪಂ ಮುಖ್ಯಾಧಿಕಾರಿ ಭೂಷಣ್ ಅವರನ್ನು ಭೇಟಿಯಾಗಿ ಚರ್ಚಿಸಿದರು.

## ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸದಸ್ಯರ ಕ್ರೀಡಾಕೂಟದ ಫಲಿತಾಂಶ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸಿದ್ಧಲಿಂಗ ನಗರದ ಎಸ್‌ವಾಯ್‌ಬಿಎಂಎಸ್ ಯೋಗಪಾಠಶಾಲೆಯ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ 15ನೇ ವಾರ್ಷಿಕೋತ್ಸವದ ಅಂಗವಾಗಿ ಸದಸ್ಯರಿಗಾಗಿ ಏರ್ಪಡಿಸಿದ್ದ ಕ್ರೀಡಾಕೂಟದ ಫಲಿತಾಂಶ ಕೆಳಗಿನಂತಿದೆ.

ವೇಗದ ನಡಿಗೆ: ಪ್ರಥಮ-ಚೈತ್ರಾ ಹದ್ದಣ್ಣವರ, ದ್ವಿತೀಯ-ಸಂಗೀತಾ ಮಡಿವಾಳರ, ತೃತೀಯ-ವೀಣಾ ಮಾಲಿಪಾಟೀಲ.

ಲಗೋರಿ ಸ್ಟ್ಯಾಂಡ್ ಬೀಳಿಸುವುದು: ಪ್ರಥಮ-ಗೌರಿ ಜೀರಂಕಳಿ, ದ್ವಿತೀಯ-ಜಯಶ್ರೀ ಡಾವಣಗೇರಿ, ತೃತೀಯ-ಸಂಗೀತಾ ಮಡಿವಾಳರ.

ಯೋಗಾಸನ: ಪ್ರಥಮ-ಚೈತ್ರಾ ಹದ್ದಣ್ಣವರ, ದ್ವಿತೀಯ-ಸಂಗೀತಾ ಮಡಿವಾಳರ, ತೃತೀಯ-ರಾಜೇಶ್ವರಿ.

ಯೋಗ ಆಶುಭಾಷ : ಪ್ರಥಮ-ಗೌರಿ ಜೀರಂಕಳಿ,



ದ್ವಿತೀಯ-ಭಾರತಿ ಪಾಟೀಲ (ಪಲ್ಲೇದ), ತೃತೀಯ-ವಿಜಯಲಕ್ಷ್ಮೀ ಮೇಕಳಿ.

ಪುಟಾಣಿ-ಕಡ್ಡಿಬೇಳೆ ಬೇರ್ಪಡಿಸುವದು: ಪ್ರಥಮ-ಮಹಾದೇವಿ ಚರಂತಿಮಠ, ದ್ವಿತೀಯ-ಲಲಿತಾ ಕಡಗದ, ತೃತೀಯ-ಸಂಗೀತಾ ನಾಕೋಡ.

ಕ್ರೀಡಾಕೂಟದಲ್ಲಿ ಭಾಗವಹಿಸಿದ ಮತ್ತು ವಿಜೇತರಾದ ಸ್ಪರ್ಧಿಗಳೆಲ್ಲರಿಗೂ ಹಾಗೂ ಬಹುಮಾನ ದಾಸೋಹ ಸೇವೆ ಸಲ್ಲಿಸಿದ ಪಾರ್ವತಿ ಭೂಮಾ, ಶಾಂತಾ ಮುಂದಿನಮನಿ, ಗಿರಿಜಾ ನಾಲತ್ವಾಡಮಠ ಮತ್ತು ಮಾರ್ಗದರ್ಶನ ನೀಡಿದ ಬಸವ ಯೋಗ ಕೇಂದ್ರ ಪ್ರಾಚಾರ್ಯ ಕೆ.ಎಸ್. ಪಲ್ಲೇದ, ನಿರ್ಣಾಯಕರಾಗಿ ಕಾರ್ಯನಿರ್ವಹಿಸಿದ ದೈಹಿಕ ಶಿಕ್ಷಣ ಶಿಕ್ಷಕರಾದ ಎಸ್.ಎಂ. ಬುರಡಿ ಇವರೆಲ್ಲರಿಗೂ ಕೇಂದ್ರದ ಅಧ್ಯಕ್ಷೆ ಜಯಶ್ರೀ ವಸ್ತ್ರದ ಹಾಗೂ ಪದಾಧಿಕಾರಿಗಳು ಅಭಿನಂದನೆ ತಿಳಿಸಿದ್ದಾರೆ.

## ಆರೋಗ್ಯ ತಪಾಸಣಾ ಕಿಟ್ ವಿತರಣೆ




■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಾ ಘಟಕ ಹಾಗೂ ಎಮ್‌ಆರ್‌ಪಿಸಿಎಲ್ (ಮಂಗಳೂರು ರಿಫೈನರಿ ಆ್ಯಂಡ್ ಪೆಟ್ರೋ ಕೆಮಿಕಲ್ಸ್ ಲಿಮಿಟೆಡ್)ಮಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಗದಗ ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಆರೋಗ್ಯ ತಪಾಸಣಾ ಕಿಟ್ ವಿತರಣಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಥೋಡ್ ಮಾತನಾಡುತ್ತಾ, ಜಿಲ್ಲೆಯಲ್ಲಿ ಎನ್‌ಸಿಡಿ ಕಾರ್ಯಕ್ರಮದಡಿಯಲ್ಲಿ ಆರೋಗ್ಯ ಸಂಸ್ಥೆಗಳ ಮೂಲಕ ಸಾರ್ವಜನಿಕ ಉಪಯೋಗಕ್ಕಾಗಿ ಮಧುಮೇಹ, ರಕ್ತದೊತ್ತಡ, ಇತರೆ ಖಾಯಿಲೆಗಳ ತಪಾಸಣೆ ಮಾಡಲಾಗುತ್ತಿದ್ದು, ಇಂತಹ ತಪಾಸಣಾ ಕಾರ್ಯಕ್ಕೆ ಸಾಕಷ್ಟು ಪ್ರಮಾಣದಲ್ಲಿ ಅತ್ಯಂತ ಅವಶ್ಯಕವಾಗಿ ಬೇಕಾದ ವೈದ್ಯಕೀಯ ಉಪಕರಣಗಳು, ಸಲಕರಣೆಗಳನ್ನು ಸಾರ್ವಜನಿಕ ಉಪಯೋಗಕ್ಕಾಗಿ ಮಂಗಳೂರು ಮೂಲದ ಎಮ್‌ಆರ್‌ಪಿಸಿಎಲ್ ಕಂಪನಿಯು ತಮ್ಮ ಸಿಎಸ್‌ಆರ್ ನಿಧಿಯಲ್ಲಿ ಜಿಲ್ಲೆಯ 13 ಆರೋಗ್ಯ ಸಂಸ್ಥೆಯಲ್ಲಿನ ಎನ್‌ಸಿಡಿ ಕ್ಲಿನಿಕ್‌ಗಳಿಗೆ ಸುಮಾರು 16.5 ಲಕ್ಷ ರೂ ಮೌಲ್ಯದ ಕಿಟ್ ವಿತರಣೆ ಮಾಡುವದರ ಮೂಲಕ ಜಿಲ್ಲೆಯ ಕಟ್ಟಕಡೆಯ ವ್ಯಕ್ತಿಯ ಅರೋಗ್ಯ ತಪಾಸಣೆ ಮಾಡಿ ರೋಗದ ತೀವ್ರತೆಯನ್ನು ಹಾಗೂ ರೋಗ ಬರದಂತೆ ಮುಂಜಾಗ್ರತೆಯನ್ನು ಕೈಗೊಳ್ಳಲು ಅನುಕೂಲಕರವಾಗುವದು ಎಂದು ತಿಳಿಸಿದರು.

> ಎಮ್.ಆರ್.ಪಿ.ಸಿ.ಎಲ್. ಮಂಗಳೂರು ಕಂಪನಿಯ ಎಕ್ಸಿಕ್ಯೂಟಿವ್ ಸಿ.ಎಸ್.ಆರ್. ಸ್ಟೀವನ್ ಪಿಂಟೋ ಮಾತನಾಡುತ್ತ, ನಾವು ನಮ್ಮ ಕಂಪನಿಯ ಸಿ.ಎಸ್.ಆರ್. ನಿಧಿಯ ಮೂಲಕ ಕೇವಲ ಮಂಗಳೂರಿಗೆ ಮಾತ್ರ ಸಿಮಿತವಾಗಿರದೆ ರಾಷ್ಟ್ರವ್ಯಾಪಿ ಸಮಾಜದ ಏಳಿಗೆಗಾಗಿ ಶಿಕ್ಷಣ, ಆರೋಗ್ಯ, ಸಂಸ್ಕೃತಿ, ಪ್ರಕೃತಿ ಹೀಗೆ ಹಲವಾರು ಕ್ಷೇತ್ರಗಳಿಗೆ ಸೇವೆ ನೀಡುತ್ತಿದ್ದು, ಪ್ರಮುಖವಾಗಿ ಆರೋಗ್ಯ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡಿ ಸಾರ್ವಜನಿಕ ಉಪಯೋಗಕ್ಕಾಗಿ ಆರೋಗ್ಯ ತಪಾಸಣಾ ಸಲಕರಣೆ, ಉಪಕರಣಗಳನ್ನು ವಿತರಿಸುವ ಕಾರ್ಯ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತಾಲೂಕಾ ಆರೋಗ್ಯಾಧಿಕಾರಿ ಡಾ.ಪ್ರೀತ್ ಖೋನ, ವೈದ್ಯಾಧಿಕಾರಿ ಡಾ.ಶರಣು ಗಾಣಗೇರ, ಡಾ. ಚೇತನ್ ಎಚ್.ಎಚ್, ಡಾ. ರವಿ ಕಡಗಾವಿ ಹಾಗೂ ಜಿಲ್ಲಾ ಸಮೀಕ್ಷಾ ಘಟಕದ, ಪ್ರಾ.ಥಮಿಕ ಆರೋಗ್ಯ ಕೇಂದ್ರದ, ಎನ್.ಸಿ.ಡಿ. ಕ್ಲಿನಿಕ್‌ನ ಸಿಬ್ಬಂದಿಗಳು ಭಾಗವಹಿಸಿದರು.

### ಧಾರವಾಡದಲ್ಲಿ ಮಾದರಿ ನೀತಿ ಸಂಹಿತೆ ಉಲ್ಲಂಘನೆಯ ಒಟ್ಟು 47 ಪ್ರಕರಣ ದಾಖಲು

# 90,49,574 ರೂ. ಮೌಲ್ಯದ ಸ್ವತ್ತು ವಶಕ್ಕೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಲೋಕಸಭೆ ಚುನಾವಣೆ ಪಾರದರ್ಶಕವಾಗಿ ಮತ್ತು ಮುಕ್ತ, ನ್ಯಾಯಸಮ್ಮತವಾಗಿ ಚುನಾವಣಾ ಆಯೋಗದ ನಿಯಮಾನುಸಾರ ಜರುಗಿಸಲು ಧಾರವಾಡ ಜಿಲ್ಲಾಡಳಿತ ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ಜಿಲ್ಲೆಯ ವಿವಿಧ ಚೇಕ್‌ಪೋಸ್ಟ್ ತಪಾಸಣೆಯಲ್ಲಿ ಮಾರ್ಚ್ 16ರಿಂದ ಮಾ.28ರವರೆಗೆ ನಗದು ಹಣ, ವಸ್ತುಗಳು ಸೇರಿದಂತೆ ಒಟ್ಟು 90,49,574 ರೂ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡ ಮಾದರಿ ನೀತಿ ಸಂಹಿತೆ ಉಲ್ಲಂಘನೆಯ 47 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ಭಾರತ ಚುನಾವಣಾ ಆಯೋಗ ಸಾರ್ವತ್ರಿಕ ಚುನಾವಣೆ ಘೋಷಣೆ ಮಾಡಿದ ಮಾರ್ಚ್ 16ರಂದು ಜಿಲ್ಲೆಯ ಗಡಿ ಭಾಗ ಮತ್ತು ಜಿಲ್ಲೆಯ ಅಂತರ ವಿಧಾನಸಭಾ ಮತಕ್ಷೇತ್ರಗಳ ಮುಖ್ಯ ಸ್ಥಳಗಳು ಸೇರಿದಂತೆ ಒಟ್ಟು 24 ಚೆಕ್‌ಪೋಸ್ಟ್‌ಗಳನ್ನು ತೆರೆಯಲಾಗಿದೆ. ಪ್ರತಿ ಚೆಕ್‌ಪೋಸ್ಟ್‌ನಲ್ಲಿ ನಿತ್ಯ ಸಂಚರಿಸುವ ಪ್ರತಿ ವಾಹನಗಳನ್ನು ತಪಾಸಣೆ ಮಾಡಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ತಪಾಸಣೆಯಲ್ಲಿ, ಸರಿಯಾದ ದಾಖಲೆಗಳಿಲ್ಲದೇ ಮತ್ತು ಚುನಾವಣಾ ಅಕ್ರಮಗಳಿಗೆ ಬಳಸಬಹುದಾದ ಸಂಶಯದ ಆಧಾರದಲ್ಲಿ ಪತ್ತೆಯಾದ 11,02,470 ರೂ ನಗದು ಹಣ, ರೂ. 3,31,084 ಮೊತ್ತದ 788.190 ಲೀಟರ್ ಮದ್ಯ, ರೂ.8,09,230 ಮೊತ್ತದ ಡ್ರಗ್ಸ್, ರೂ. 38,50,000 ಮೊತ್ತದ ಬಂಗಾರದ ಆಭರಣ ಮತ್ತು ರೂ. 29,56,790 ಮೌಲ್ಯದ ಮಿಕ್ಸರ್, ಸೀರೆ, ಪ್ಯಾಂಟ್ ಪೀಸ್ ಸೇರಿದಂತೆ ವಿವಿಧ ರೀತಿಯ ವಸ್ತುಗಳನ್ನು ವಶಪಡಿಸಿಕೊಂಡು ನಿಯಮಾನುಸಾರ ಅಗತ್ಯ ಕ್ರಮ ಜರುಗಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಮಾದರಿ ನೀತಿ ಸಂಹಿತೆ ಉಲ್ಲಂಘನೆ ಅಡಿಯಲ್ಲಿ ಎಫ್.ಎಸ್.ಟಿ ಇಂದ 1 ಪ್ರಕರಣ, ಎಸ್.ಎಸ್.ಟಿ. ಇಂದ 5 ಪ್ರಕರಣ ಹಾಗೂ ಅಬಕಾರಿ ಕಾನೂನು ಉಲ್ಲಂಘನೆಯಡಿ 41 ಪ್ರಕರಣಗಳು ಸೇರಿವೆ ಎಂದು ಅವರು ತಿಳಿಸಿದ್ದಾರೆ.

### ತೇಜಸ್ ಎಂ.ಕೆ.1 ಎ ಏರ್‌ಕ್ರಾಫ್ಟ್ ಯಶಸ್ವಿ ಹಾರಾಟ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ತೇಜಸ್ ಎಂ.ಕೆ.1 ಎ ಏರ್‌ಕ್ರಾಫ್ಟ್ ಸರಣಿಯ ಎಲ್‌ಎ 5033 ಯುದ್ಧ ವಿಮಾನ ಗುರುವಾರ ಬೆಂಗಳೂರಿನ ಎಚ್‌ಎಎಲ್ ವಿಮಾನ ನಿಲ್ದಾಣದಿಂದ ಆಕಾಶಕ್ಕೆ ಹಾರಿತು. ಒಟ್ಟು 18 ನಿಮಿಷಗಳ ಹಾರಾಟ ನಡೆಸಿದ ವಿಮಾನವನ್ನು ಮುಖ್ಯ ಪರೀಕ್ಷಾ ಪೈಲಟ್, ಗ್ರೂಪ್ ಕ್ಯಾಪ್ಟನ್ ಕೆ ಕೆ ವೇಣುಗೋಪಾಲ್ (ನಿವೃತ್ತ) ನಿಯಂತ್ರಿಸಿದರು.


## ಶ್ರೀ ರಂಭಾಪುರಿ ಜಗದ್ಗುರುಗಳ ಏಪ್ರಿಲ್ ಮಾಹೆಯ ಪ್ರವಾಸದ ವಿವರ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳ ಏಪ್ರಿಲ್ ತಿಂಗಳ ಪ್ರವಾಸ ಕಾರ್ಯಕ್ರಮ ಈ ಕೆಳಗಿನಂತಿವೆ.

ಏ. 1ರಂದು ಬೈಲಹೊಂಗಲದ ವಣ್ಣೂರು ಗ್ರಾಮದಲ್ಲಿ ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ಸಮಾರಂಭ, 2ರಂದು ತೀರ್ಥಹಳ್ಳಿಯ ಕವಲೇದುರ್ಗ ಮಠದಲ್ಲಿ ಇಷ್ಟಲಿಂಗ ಮಹಾಪೂಜಾ, 3ರಂದು ರಾಣೆಬೆನ್ನೂರಿನ ಲಿಂಗದಹಳ್ಳಿಯಲ್ಲಿ ಇಷ್ಟಲಿಂಗ ಮಹಾಪೂಜಾ, 4ರಂದು ಅಜ್ಜಂಪುರದ ಗೌರಾಪುರದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಸಮಾರಂಭ, 5ರಂದು ಹೊನ್ನಾಳಿಯ ಕುಳಗಟ್ಟೆಯಲ್ಲಿ ಇಷ್ಟಲಿಂಗ ಮಹಾಪೂಜಾ, 6ರಂದು ಕಡೂರಿನ ಹೊಗರೆಖಾನ್ ಗ್ರಾಮದಲ್ಲಿ ಶ್ರೀ ಸಿದ್ದೇಶ್ವರ ಕ್ಷೇತ್ರದಲ್ಲಿ ಮಂಡಲ ಪೂಜಾ ಸಮಾರಂಭ, 7ರಂದು ಚಿಕ್ಕಮಗಳೂರಿನ ಮುತ್ತಿನಪುರದ ಶ್ರೀ ವೀರಭದ್ರೇಶ್ವರ ಕ್ಷೇತ್ರದಲ್ಲಿ ಮಂಡಲ ಪೂಜಾ ಸಮಾರಂಭದ ಸಾನ್ನಿಧ್ಯ ವಹಿಸುವರು.

ಹುಬ್ಬಳ್ಳಿ ತಾಲೂಕ ತಿರುಮಲಕೊಪ್ಪದ ಶ್ರೀ ಜಗದ್ಗುರು ರೇಣುಕ ಧರ್ಮ ನಿವಾಸದಲ್ಲಿ 8ರಂದು ಧರ್ಮ ಜಾಗೃತಿ ಸಮಾರಂಭ, 9ರಂದು ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ ಹಾಗೂ ಶ್ರೀ ಜಗದ್ಗುರು ರೇಣುಕಾಚಾರ್ಯರ ರಥೋತ್ಸವ ಸಮಾರಂಭ, 10ರಂದು ಹುಬ್ಬಳ್ಳಿಯಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಸಮಾರಂಭ, 11-12ರಂದು ಧಾರವಾಡದ ಅಮ್ಮಿನಭಾವಿಯಲ್ಲಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸುವರು.



13ರಂದು ಹುಬ್ಬಳ್ಳಿಯ ಹಳ್ಳಿಯಾಳದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರ ರಥೋತ್ಸವ ಹಾಗೂ ಧರ್ಮ ಸಮಾರಂಭ, 14ರಂದು ಹಾವೇರಿಯ ನೆಗಳೂರಿನಲ್ಲಿ ಕಳಸಾರೋಹಣ ಮತ್ತು ಸಾಮೂಹಿಕ ವಿವಾಹ ಸಮಾರಂಭ, 15ರಂದು ಕಲಘಟಗಿಯ ಸಂಗೇದೇವರಕೊಪ್ಪದಲ್ಲಿ ನೂತನ ದೇವಾಲಯ ಉದ್ಘಾಟನಾ ಸಮಾರಂಭ, 16ರಂದು ಕಲಘಟಗಿ ತಾಲೂಕ ಬೇಗೂರು ಗ್ರಾಮದಲ್ಲಿ ಗ್ರಾಮದೇವಿ ಪ್ರತಿಷ್ಠಾಪನಾ ಸಮಾರಂಭ, 17ರಂದು ಚಡಚಣ ತಾಲೂಕ ಏಳಗಿ ಪಿ.ಎಸ್. ಗ್ರಾಮದಲ್ಲಿ ಶ್ರೀ ವೀರಭದ್ರಸ್ವಾಮಿ ಮಹಾದ್ವಾರ ಉದ್ಘಾಟನಾ ಸಮಾರಂಭ, 18ರಂದು ಅಫಜಲಪುರ ತಾಲೂಕ ಕರಜಗಿಯಲ್ಲಿ ಶ್ರೀ ಮಲ್ಲಿಕಾರ್ಜುನ ದೇವಸ್ಥಾನ ಕಳಸಾರೋಹಣ, 19ರಂದು ಚಿತ್ತಾಪುರದ ಶ್ರೀ ಸಿದ್ಧೇಶ್ವರ ಜ್ಞಾನಧಾಮದಲ್ಲಿ ಧರ್ಮ ಸಮಾರಂಭ 23ರಂದು ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ಮಹಾಪೀಠದಲ್ಲಿ ಪೌರ್ಣಿಮೆಯ ನಿಮಿತ್ಯ ವಾಸ್ತವ್ಯ ಮಾಡಿ ಭಕ್ತಾದಿಗಳಿಗೆ ದರ್ಶನ ಆಶೀರ್ವಾದ ನೀಡುವರು.


29ರಂದು ಕುಂದಗೋಳದ ಪಶುಪತಿಹಾಳದಲ್ಲಿ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸುವರು ಎಂದು ಶ್ರೀ ಪೀಠದ ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್. ಬಾಳನಗೌಡ್ರ ತಿಳಿಸಿದ್ದಾರೆ.

## ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಶ್ರೀ ಅಗ್ನಿಬನ್ನಿರಾಯಸ್ವಾಮಿ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಗುರುವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶ್ರೀ ಅಗ್ನಿಬನ್ನಿರಾಯಸ್ವಾಮಿ ಜಯಂತಿಯನ್ನು ಆಚರಿಸಲಾಯಿತು.

ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಶ್ರೀ ಅಗ್ನಿಬನ್ನಿರಾಯಸ್ವಾಮಿ ಅವರ ಭಾವಚಿತ್ರಕ್ಕೆ ಪೂಜೆಯೊಂದಿಗೆ ಪುಷ್ಪಾರ್ಪಣೆ ಸಲ್ಲಿಸಿ, ನಮಿಸಿದರು.




ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಜಯಂತಿ ಕಾರ್ಯಕ್ರಮವನ್ನು ಸರಳವಾಗಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ, ವಿವಿಧ ಸಮಾಜ ಗಣ್ಯರು, ಹಿರಿಯ ನಾಗರಿಕರು, ಸಾರ್ವಜನಿಕರು ಉಪಸ್ಥಿತರಿದ್ದರು.

'ವಿಶ್ವ ರಂಗಭೂಮಿ ದಿನಾಚರಣೆ' ಕಾರ್ಯಕ್ರಮದಲ್ಲಿ ಹಿರಿಯ ಕಲಾವಿದೆ ಗಾಯತ್ರಿ ಹಿರೇಮಠ

# ರಂಗಭೂಮಿ ಕಲಾವಿದರು ಆರ್ಥಿಕವಾಗಿ ಸಬಲರಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯ ಗದಗ ಹಾಗೂ ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ಗದಗ ಮತ್ತು ಮಹಾವಿದ್ಯಾಲಯದ ವುಮೆನ್ಸ್ ಸೆಲ್ ಇವುಗಳ ಸಂಯುಕ್ತ ಆಶ್ರಯದಲ್ಲಿ 'ವಿಶ್ವ ರಂಗಭೂಮಿ ದಿನಾಚರಣೆ'ಯನ್ನು ಹಮ್ಮಿಕೊಳ್ಳಲಾಗಿತ್ತು.

ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದ ಸೆಮಿನಾರ್ ಹಾಲ್‌ನಲ್ಲಿ ನಡೆದ ಕಾರ್ಯಕ್ರಮವನ್ನು ಹಿರಿಯ ಕಲಾವಿದೆ ಗಾಯತ್ರಿ ಹಿರೇಮಠ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕಲಾವಿದರ ಬದುಕು, ಬವಣೆ, ರಂಗಭೂಮಿಯಲ್ಲಿ ಆಗುತ್ತಿರುವ ಆಧುನಿಕ ಬದಲಾವಣೆಗಳು, ಕನ್ನಡ ರಂಗಭೂಮಿಯ ಹೊಸ ಪ್ರಯತ್ನಗಳು, ವೃತ್ತಿ ರಂಗಭೂಮಿ ಮತ್ತು ಹವ್ಯಾಸಿ ರಂಗಭೂಮಿಯ ಸಂಕ್ಷಿಪ್ತ ಹಿನ್ನೆಲೆಗಳನ್ನು ಮೆಲುಕುಹಾಕಿ, ಬದಲಾದ ಕಾಲಘಟ್ಟದಲ್ಲಿ ರಂಗಭೂಮಿ ಕಲಾವಿದರು ಆರ್ಥಿಕವಾಗಿ ಸಬಲರಾಗಬೇಕೆಂದು ಕರೆ ನೀಡಿದರು.

ಅತಿಥಿಗಳಾಗಿ ಆಗಮಿಸಿದ್ದ ಸುನಂದಾ ಹಿರೇಮಠ ಮಾತನಾಡಿ, ಗಂಡು ಕಲೆಯಾದ ನಾಟಕರಂಗದಲ್ಲಿ ಹೆಣ್ಣೊಬ್ಬಳು ಸಾಧನೆ ಮಾಡುವುದು ಸುಲಭದ ಕೆಲಸವಲ್ಲ. ಹೆಣ್ಣುಮಕ್ಕಳ ಪಾತ್ರವನ್ನು ಗಂಡು ಮಕ್ಕಳೇ ನಿರ್ವಹಿಸುತ್ತಿದ್ದ ಒಂದು ಕಾಲವಿತ್ತು. ಆದರೆ ಇವತ್ತಿಗೂ ಕೂಡ ತಮ್ಮ ತಾಯಿಯವರಾದ ಗಾಯತ್ರಿ ಹಿರೇಮಠ ಅವರು ಹೆಣ್ಣಾಗಿಯೂ ಕೂಡ ಗಂಡು ಪಾತ್ರವನ್ನು ಅಷ್ಟೇ ಸಮರ್ಥವಾಗಿ ನಿಭಾಯಿಸಬಲ್ಲರು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಗದಗ ತಾಲೂಕಾ ಕ.ಸಾ.ಪ ಅಧ್ಯಕ್ಷೆ ಡಾ. ರಶ್ಮಿ ಅಂಗಡಿ, ರಂಗಭೂಮಿ ನಡೆದು ಬಂದ ದಾರಿಯನ್ನು ಮತ್ತು ಕನ್ನಡದಲ್ಲಿ ವಿಶೇಷವಾಗಿ ಮಹಿಳೆಯರು ಮಾಡಿರುವ ಸಾಧನೆಯನ್ನು ನೆನಪಿಸಿಕೊಂಡರು.

ಕಸಾಪ ಸಹಕಾರ್ಯದರ್ಶಿ ವಿಶ್ವನಾಥ ಬೇಂದ್ರೆ ಮಾತನಾಡಿ, ಮನುಷ್ಯನಿಗೆ ಕಲೆಗಳ ಅಗತ್ಯತೆಯ ಕುರಿತು ತಿಳಿಸುತ್ತ, ಓದು-ಬರಹದ ಜೊತೆಗೆ ಮನಸ್ಸನ್ನು ಸ್ಥಿರಗೊಳಿಸಲು, ಚಂಚಲತೆಯನ್ನು ಹೋಗಲಾಡಿಸಲು ಕಲೆಯ ಅಗತ್ಯ ಇಂದಿನ ವಿದ್ಯಾರ್ಥಿಗಳಿಗೆ ಇದೆ ಎಂದರು.

ಮಹಾವಿದ್ಯಾಲಯದ ವಿದ್ಯಾರ್ಥಿ ಶಿವಮೂರ್ತಯ್ಯ ರೇಷ್ಮಿ ಕನ್ನಡ ರಂಗಭೂಮಿ ಕುರಿತು ಮಾತನಾಡುತ್ತ, ಗೊಂಬೆಯಾಟ, ತೊಗಲು ಗೊಂಬೆಯಾಟ, ಬಯಲಾಟ, ಯಕ್ಷಗಾನ, ದೊಡ್ಡಾಟ, ಕನ್ನಡ ಜನಪದದ ಮೂಲ ರೂಪಗಳೇ ಆಗಿವೆ. ಜನಪದ ರಂಗಭೂಮಿಯ ಮೂಲ ಅಂಶಗಳು ದೈವಾರಾಧನೆಯಲ್ಲಿಯೇ ಕಂಡುಬರುತ್ತದೆ. ವೈದ್ಯರ ಕುಣಿತ, ನಾಗನೃತ್ಯಗಳು ಕರಾವಳಿಯ ಹಳ್ಳಿಗಳಲ್ಲಿ ಕಾಣಸಿಗುತ್ತವೆ ಎಂದರು.

ಫಕ್ರುದ್ದೀನ, ಶಶಿಧರ ಮಾಳೋಜಿ, ಓಂಕಾರ ತೋರಟ್, ಬಸಪ್ಪ, ಪೂರ್ಣಿಮಾ, ಪ್ರತಿಭಾ ಪವಾರ, ವಿಜಯಲಕ್ಷ್ಮೀ ಬಿ., ಅದಿತಿ ನಾಡಿಗೇರ್, ಪ್ರಜ್ವಲ್ ಜಡಿಮಠ, ಶೇಷಾದ್ರಿ ಕುಲಕರ್ಣಿ ಸಹಕಾರ ನೀಡಿದರು. ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದ ಎಲ್ಲ ಸಿಬ್ಬಂದಿಗಳು, ಕಸಾಪ ಪದಾಧಿಕಾರಿಗಳು, ಸದಸ್ಯರು, ಡಾ. ಶೈಲಜಾ ಮುದೇನಗುಡಿ, ಡಾ. ಅಶ್ವಿನಿ ಅರಳಿ, ಪ್ರೊ. ಮುಕ್ತಾ ಪಾಟೀಲ, ಪ್ರೊ. ನೀತಾ, ಪ್ರೊ. ರೇಖಾ, ತನುಶ್ರೀ, ಪ್ರೊ. ಸುಜಾತ ಬೆಟಗೇರಿ ಹಾಜರಿದ್ದರು.

ತೇಜಸ್ವಿನಿ ಮಡಿವಾಳರ ಪ್ರಾರ್ಥಿಸಿದರು. ಮಂಜುನಾಥ ಸಿಂಗಣ್ಣವರ ಸ್ವಾಗತಿಸಿದರು. ಮಾನ್ಯ ಶೆಟ್ಟಿ, ಆಕಾಂಕ್ಷ ಕಲ್ಯಾಣಶೆಟ್ಟಿ ಅತಿಥಿಗಳನ್ನು ಪರಿಚಯಿಸಿದರು. ಜ್ಯೋತಿ ಎಸ್, ಶ್ರುತಿ ನಿರೂಪಿಸಿದರು. ಭೂಮಿಕ ಹಿರೇಮಠ ವಂದಿಸಿದರು.



ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಉಪಪ್ರಾಂಶುಪಾಲ ಡಾ. ಈರಣ್ಣ ಕೊರಚಗಾಂವ್ ಮಾತನಾಡಿ, ರಂಗಭೂಮಿಯ ಕುರಿತು ಮಹಾವಿದ್ಯಾಲಯದಲ್ಲಿ ಯಾವುದೇ ಕಾರ್ಯಕ್ರಮ ಆಯೋಜನೆಯಾಗಿರಲಿಲ್ಲ. ಈ ಬೆಳವಣಿಗೆ ನಿಜಕ್ಕೂ ಸ್ವಾಗತಾರ್ಹ. ಜಿಲ್ಲಾ ಕಸಾಪ ಮತ್ತು ಗದಗ ತಾಲೂಕಾ ಕಸಾಪ ಈ ಭಾಗದಲ್ಲಿ ಕ್ರಿಯಾಶೀಲವಾಗಿ ಕಾರ್ಯ ನಿರ್ವಹಿಸುತ್ತಿವೆ. ಪ್ರತಿ ಶನಿವಾರ ಸಂಜೆ ಕಾರ್ಯಕ್ರಮಗಳು ನಡೆಯುತ್ತವೆ ವಿದ್ಯಾರ್ಥಿಗಳು, ಸಾಹಿತ್ಯಾಸಕ್ತರು ಪಾಲ್ಗೊಳ್ಳಬೇಕೆಂದು ಹೇಳಿದರು.

## ಹೆಚ್ಚುವರಿ ವಿಶೇಷ ಸಾರಿಗೆಗಳ ಕಾರ್ಯಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2024ನೇ ಸಾಲಿನ ಗುಡ್‌ಫ್ರೈಡೆ ರಜೆ ಪ್ರಯುಕ್ತ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ ವಾ.ಕ.ರ.ಸಾ.ಸಂಸ್ಥೆಯ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 100 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

ಮಾ. 29ರಂದು ಗುಡ್ ಫ್ರೈಡೇ, 30 ಮತ್ತು 31 ರಂದು ಶನಿವಾರ ಮತ್ತು ರವಿವಾರ ವಾರಾಂತ್ಯ ಇರುವುದರಿಂದ ಬೆಂಗಳೂರು ಮತ್ತು ಇತರೇ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುವುದು.

ಬೆಂಗಳೂರಿನಿಂದ ರಾಜ್ಯ/ಅಂತಾರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ಮಾ. 28 ರಿಂದ ಮಾ. 30 ರವರೆಗೆ ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ರಜೆ ಮುಗಿದ ಮೇಲೆ ಮಾ. 31 ರಂದು ಮತ್ತು ನಂತರದ ದಿನಗಳಂದು ಪ್ರಮುಖ ಸ್ಥಳಗಳಿಂದ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಸದುಪಯೋಗ ಪಡಿಸಿಕೊಳ್ಳುವದರೊಂದಿಗೆ, ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಂತೆ ಮತ್ತು ವಿಶೇಷ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.

## ಮತಗಟ್ಟೆಗಳ ಯಾದಿ ಪ್ರಕಟ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆ 2024ನೇದ್ದಕ್ಕೆ ಸಂಬಂಧಿಸಿದಂತೆ ಭಾರತ ಚುನಾವಣಾ ಆಯೋಗವು ಮತಗಟ್ಟೆಗಳ ಸ್ಥಾಪನೆಗೆ ಅನುಮೋದನೆ ನೀಡಿದ್ದು, ಮಾರ್ಗಸೂಚಿಯಂತೆ ಮತಗಟ್ಟೆ ಯಾದಿಗಳನ್ನು ಪ್ರಕಟಿಸಲಾಗಿದೆ. ಹಾಗೂ ಸದರಿ ಯಾದಿಗಳನ್ನು ಗದಗ ಜಿಲ್ಲಾಧಿಕಾರಿಗಳ ವೆಬ್‌ಸೈಟ್ http://gadag.nic.in ನಲ್ಲಿಯೂ ಸಹ ಪ್ರಕಟಿಸಲಾಗಿರುತ್ತದೆ ಎಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ನಾಲ್ವಾಡ ಓಣಿಯಲ್ಲಿ ಕಾಮರತಿ ಉತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ನಾಲ್ವಾಡದವರ ಓಣಿಯಲ್ಲಿ 99ನೇ ವರ್ಷದ ಕಾಮರತಿ ಉತ್ಸವವನ್ನು ಸಡಗರದಿಂದ ಆಚರಿಸಲಾಯಿತು.

ಮಂಗಳವಾರ ಉತ್ಸವ ಸಮಿತಿಯು ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮವನ್ನು ಏರ್ಪಡಿಸಿತ್ತು. ಸುಮಾರು 800ಕ್ಕೂ ಹೆಚ್ಚಿನ ಮಹಿಳೆಯರು ಕಾಮರತಿಯ ದರ್ಶನ ಪಡೆದುಕೊಂಡು ತಮ್ಮ ಇಷ್ಟಾರ್ಥ ಸಂಕಲ್ಪಗಳನ್ನು ಮಾಡಿಕೊಂಡರು. ಸಾರ್ವಜನಿಕರಿಗೆ ಪ್ರಸಾದದ ವ್ಯವಸ್ಥೆಯನ್ನು ಮಾಡಲಾಗಿತ್ತು.

ನಾಲ್ವಾಡ ಓಣಿಯ ಗುರು ಹಿರಿಯರು, ಯುವಕರು ಎಲ್ಲ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಿ ಮುಂದಿನ ವರ್ಷ 100ನೇ ವರ್ಷದ ಕಾಮರತಿ ಉತ್ಸವವನ್ನು ಸಂಭ್ರಮ ಸಡಗರದೊಂದಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಆಚರಿಸಲು ನಿರ್ಧರಿಸಿದರು.



## ಗುಲಗಂಜಿಕೊಪ್ಪದಲ್ಲಿ ಮತದಾನ ಜಾಗೃತಿ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಳೆದ 2019ರ ಲೋಕಸಭಾ ಚುನಾವಣೆಯಲ್ಲಿ ಅತೀ ಕಡಿಮೆ ಮತದಾನವಾಗಿರುವ ಗುಲಗಂಜಿಕೊಪ್ಪದ ಎರಡು ಮತ ಕೇಂದ್ರಗಳ ವ್ಯಾಪ್ತಿಯ ಮತದಾರರಲ್ಲಿ ತಪ್ಪದೇ ಮತ ಚಲಾತಯಿಸುವಂತೆ ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಸ್ವರೂಪ ಟಿ.ಕೆ ಕರೆ ನಿಡಿದರು.

ಸರಕಾರಿ ಮಾದರಿ ಕನ್ನಡ ಶಾಲೆಯ ಹತ್ತಿರ ಮಾನವ ಸರಪಳಿ ನಿರ್ಮಿಸಿ ಮತದಾನದ ಘೋಷಣೆಗಳನ್ನು ಕೂಗುವ ಮೂಲಕ ಮಾಳಾಪೂರ ಬಸ್ ನಿಲ್ದಾಣದಲ್ಲಿ ಎಲ್ಲರೂ ಸೇರಿ ಮತದಾನ ಪ್ರತಿಜ್ಞಾ ವಿಧಿ ಬೋಧಿಸಿ, ಮನೆ ಮನೆಗೆ ತೆರಳಿ ಮತದಾನದ ಬಗ್ಗೆ ಜಾಗೃತಿ ಮೂಡಿಸಿದರು. ನಂತರ ಎಲ್ಲ ಮತಗಟ್ಟೆಗಳನ್ನು ಪರಿಶೀಲಿಸಿ, ಮತದಾನ ಜಾಗೃತಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಮೇ 7ರಂದು ತಪ್ಪದೇ ಮತದಾನ ಮಾಡುವಂತೆ ಸಾರ್ವಜನಿಕರಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಆರೋಗ್ಯಾಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಸಹಾಯಕ ನಿರ್ದೇಶಕರು (ಗ್ರಾ.ಉ), ಆಶಾ ಕಾರ್ಯಕರ್ತರು, ಅಂಗನವಾಡಿ ಕಾರ್ಯಕರ್ತರು, ಬಿಎಲ್‌ಓಗಳು, ತಾ.ಪಂನ ಎಲ್ಲ ಅಧಿಕಾರಿ, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಚಿನ್ಮಯ ಸಾಂಸ್ಕೃತಿಕ ಅಕಾಡೆಮಿವತಿಯಿಂದ 'ವಿಶ್ವ ರಂಗಭೂಮಿ ದಿನಾಚರಣೆ

# ರಂಗಕಲೆ ವ್ಯಕ್ತಿತ್ವ ರೂಪಿಸುವಲ್ಲಿ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಬದುಕಿನ ಮೌಲ್ಯಗಳನ್ನು ತಿಳಿಸಿಕೊಡುವಲ್ಲಿ, ಮಾರ್ಗದರ್ಶಿಸವಲ್ಲಿ ರಂಗಕಲೆ ಅತ್ಯಂತ ಪರಿಣಾಮಕಾರಿ ಮಾಧ್ಯಮವಾಗಿದ್ದು, ಅದು ಸದಾ ಕ್ರಿಯಶೀಲವಾಗಿರಬೇಕು. ರಂಗಭೂಮಿ ದಿನಾಚರಣೆ ಕೇವಲ ಔಪಚಾರಿಕತೆ ಪಡೆದುಕೊಳ್ಳದಿರಲಿ ಎಂದು ಡಿಜಿಎಮ್ ಆಯುರ್ವೇದ ಮಹಾವಿದ್ಯಾಲಯದ ನಿರ್ವತ್ತ ಪ್ರಾಂಶುಪಾಲರು ಹಾಗೂ ಸಾಂಸ್ಕೃತಿಕ ಸಂಘಟಕ ಡಾ. ಜಿ.ಬಿ. ಪಾಟೀಲ ಅಭಿಪ್ರಾಯಪಟ್ಟರು.

ಅವರು ನಗರದ ಕಬ್ಬಿಗರ ಕೂಟದ ಸಾಹಿತ್ಯ ಭವನದಲ್ಲಿ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 'ವಿಶ್ವ ರಂಗಭೂಮಿ ದಿನಾಚರಣೆ-2024' ಕಾರ್ಯಕ್ರಮದಲ್ಲಿ ಹಿರಿಯ ರಂಗಕರ್ಮಿ ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ ಅವರಿಗೆ 'ಚಿನ್ಮಯ ಕಲಾಶ್ರೀ' ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

ರಂಗಕಲೆಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತ ನಾವೆಲ್ಲ ತೊಡಗಿಸಿಕೊಂಡಾಗ ಮಾತ್ರ ರಂಗಭೂಮಿ ದಿನಾಚರಣೆಗೆ ನೈಜ ಅರ್ಥಬರಲು ಸಾಧ್ಯ ಎಂದರು.




'ಚಿನ್ಮಯ ಕಲಾಶ್ರೀ' ಪ್ರಶಸ್ತಿ ಸ್ವೀಕರಿಸಿದ ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ ಮಾತನಾಡಿ, ಶ್ರೀರಾಘವೇಂದ್ರ ಸೇವಾ ಸಮಿತಿ ಹಾಗೂ ಆರ್‌ಎನ್‌ಕೆ ಮಿತ್ರಮಂಡಳಿಗಳು ಕಳೆದ ಎರಡು ದಶಕಗಳಿಂದ ನನ್ನ ರಂಗ ಚಟುವಟಿಕೆಗಳಿಗೆ ಬೆನ್ನೆಲುಬಾಗಿ ನಿಂತದ್ದು ಸ್ಮರಣಾರ್ಹ. ಪರಸ್ಪರರಲ್ಲಿ ವಿಶ್ವಾಸಾರ್ಹತೆ, ಶಾಂತಿ ನೆಮ್ಮದಿ ನೀಡುವಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳ ಪಾತ್ರ ಮಹತ್ವದ್ದು. ಇಂದಿನ ಮಕ್ಕಳು ಮೊಬೈಲ್ ಗೀಳು ಬದಿಗಿಟ್ಟು, ಸಾಂಸ್ಕೃತಿಕ ಚಟುವಟಿಕೆಗಳಿಗೆ ಹೆಚ್ಚು ಸಮಯ ನೀಡಬೇಕು. ರಂಗಕಲೆ ಮನುಷ್ಯನ ಸರ್ವಾಂಗೀಣ ವ್ಯಕ್ತಿತ್ವ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಗೌರವ ಅಧ್ಯಕ್ಷರಾದ ಪ್ರೊ. ಎಮ್. ಎಸ್. ಕುಲಕರ್ಣಿ ಅಧ್ಯಕ್ಷೀಯ ನುಡಿಗಳಾಡಿದರು.

ಹಿರಿಯ ರಂಗ ಸಾಧಕರಾದ ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ ಅವರಿಗೆ 'ಚಿನ್ಮಯ ಕಲಾಶ್ರೀ' ಪ್ರಶಸ್ತಿ ಪ್ರದಾನ ಮಾಡಲಾಯಿತು. ಕರ್ನಾಟಕ ಜಾನಪದ ಅಕಾಡೆಮಿಗೆ ಸದಸ್ಯರಾಗಿ ನೇಮಕ ಹೊಂದಿರುವ ಜಿಲ್ಲೆಯ ಹಿರಿಯ ಜಾನಪದ ಕಲಾವಿದ ಶಂಕರಣ್ಣ ಸಂಕಣ್ಣವರ ಹಾಗೂ ಕರ್ನಾಟಕ ಬಂಜಾರ ಅಕಾಡೆಮಿಗೆ ಸದಸ್ಯರಾಗಿ ನೇಮಕಗೊಂಡ ಜಾನಪದ ಕಲಾವಿದೆ ಸಾವಿತ್ರಿಬಾಯಿ ಲಮಾಣಿ ಅವರನ್ನು ಸನ್ಮಾನಿಸಲಾಯಿತು.

ರೋಣ ತಾಲೂಕಿನ ಹುಲ್ಲೂರ ಗ್ರಾಮದ ಕಲಾವಿದರಾದ ರಾಮಕೃಷ್ಣ ಪೂಜಾರ ಮತ್ತು ತಂಡದವರು ರಂಗ ಗೀತೆಗಳನ್ನು ಪ್ರಸ್ತುತಪಡಿಸಿದರು. ರಾಮಕೃಷ್ಣ ಪೂಜಾರ ಪ್ರಾರ್ಥಿಸಿದರು. ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಅಧ್ಯಕ್ಷ ಮೌನೇಶ ಸಿ.ಬಡಿಗೇರ(ನರೇಗಲ್ಲ) ಸ್ವಾಗತಿಸಿ ಪ್ರಾಸ್ತವಿಕವಾಗಿ ಮಾತನಾಡಿದರು. ಕಲಾವಿದರಾದ ವೀರಯ್ಯ ಹೊಸಮಠ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ಕಾರ್ಯಕ್ರಮದಲ್ಲಿ ಗಣ್ಯರಾದ ಸುಶಿಲೇಂದ್ರ ಜೋಷಿ, ಅಂದಾನೆಪ್ಪ ವಿಭೂತಿ, ಕಾವೆಂ ಶ್ರೀನಿವಾಸ, ವಾದಿರಾಜ ಸೊರಟೂರ, ಗಾಯತ್ರಿ ಹಿರೇಮಠ, ಸುಮಾ ಪಿಡ್ಡನಗೌಡರ್, ಸೀತಾಬಾಯಿ ದ್ಯಾಮೇನಹಳ್ಳಿ, ಶುಭಾಂಗಿ ದ್ಯಾಮೇನಹಳ್ಳಿ, ಅಶೋಕ ಗಿರಡ್ಡಿ, ವಿಶ್ವನಾಥ ಬೇಂದ್ರೆ, ರಾಚಯ್ಯ ಹೊಸಮಠ, ಡಾ. ಪ್ರಭು ಗಂಜಿಹಾಳ, ಸೋಮು ಚಿಕ್ಕಮಠ, ಧರ್ಮೇಂದ್ರ ಇಟಗಿ, ಬಸವರಾಜ ಈರಣ್ಣವರ, ಪರುಶುರಾಮ ರಾಮಪೂರ, ಮಂಜುನಾಥ ಒಂಟೆತ್ತಿನ, ಶ್ರೀಕಾಂತ ಕುಲಕರ್ಣಿ ಸೇರಿದಂತೆ ರಂಗಾಸಕ್ತರು ಭಾಗವಹಿಸಿದ್ದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ, ಕಬ್ಬಿಗರ ಕೂಟದ ಸಂಸ್ಥಾಪಕರು ಹಾಗೂ ಹಿರಿಯ ಸಾಹಿತಿಗಳಾದ ಡಿ.ವಿ. ಬಡಿಗೇರ ಮಾತನಾಡಿ, ಗದಗ ಜಿಲ್ಲೆ ಅದರಲ್ಲೂ ವಿಶೇಷವಾಗಿ ಶಹಪೂರಪೇಟೆ ರಂಗಭೂಮಿಗೆ ವೈಶಿಷ್ಟ್ಯಪೂರ್ಣ ಕೊಡುಗೆ ನೀಡಿದೆ. ಇಂತಹ ನಗರದಲ್ಲಿ ರಂಗ ಚಟುವಟಿಕೆಗಳು ಹೆಚ್ಚಾಗಿ ನಡೆಯಬೇಕು. ಅಂತಹ ಕಾರ್ಯಗಳಿಗೆ ಕಬ್ಬಿಗರ ಕೂಟದ ಸಭಾಭವನ ಸದಾ ಸಹಕಾರ ನೀಡಲಿದೆ ಎಂದು ತಿಳಿಸಿದರು.

ದಿ.ಮೊಹರೆ ಹಣಮಂತರಾಯ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಷಣ್ಮುಖ ಕೋಳಿವಾಡ

# ಸಾಮಾಜಿಕ ಅಭಿವೃದ್ಧಿಯಲ್ಲಿ ಪತ್ರಿಕೆಗಳ ಶ್ರಮವಿದೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಪ್ರಜಾಪ್ರಭುತ್ವದ ನಾಲ್ಕನೇ ಅಂಗ ಪತ್ರಿಕಾರಂಗದಲ್ಲಿ, ಪತ್ರಿಕೆಗಳು ಸದಾ ತಿಳುವಳಿಕೆ ನೀಡುವ ಮೂಲಕ ಸಾಮಾಜಿಕ ಅಭಿವೃದ್ಧಿಗೆ ಹಗಲಿರಳು ಶ್ರಮಿಸುತ್ತ ದೇಶದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡುತ್ತಿವೆ ಎಂದು ಸಂಯುಕ್ತ ಕರ್ನಾಟಕ ದಿನಪತ್ರಿಕೆಯ ಹುಬ್ಬಳ್ಳಿ ಸ್ಥಾನಿಕ ಸಂಪಾದಕ ಷಣ್ಮುಖ ಕೋಳಿವಾಡ ಅಭಿಪ್ರಾಯಪಟ್ಟರು.

ಕವಿವಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಸಭಾಂಗಣದಲ್ಲಿ ಗುರುವಾರ ಪತ್ರಕರ್ತ ದಿ.ಮೊಹರೆ ಹಣಮಂತರಾಯ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಧಾರವಾಡದಲ್ಲಿ ಮುರುಘಾಮಠದ ಉಚಿತ ಪ್ರಸಾದ ನಿಲಯ, ಕವಿವಿಯಲ್ಲಿ ನಿರಂತರ ಓದಿನ ಮೂಲಕ ಸಾವಿರಾರು ಜನ ವಿದ್ಯಾರ್ಥಿಗಳು ಉನ್ನತ ಹುದ್ದೆಗೆ ಏರಿದ್ದನ್ನು ಸ್ಮರಿಸಿದ ಅವರು, ಪತ್ರಕರ್ತ ಮೊಹರೆ ಹಣಂತರಾಯರು ಕಾಲು ಶತಮಾನ ಕಾಲ ಸಂಯುಕ್ತ ಕರ್ನಾಟಕ ದಿನ ಪತ್ರಿಕೆ ಸಂಪಾದಕರಾಗಿ ಭದ್ರ ಬುನಾದಿ ಹಾಕಿದವರು. ವಯಕ್ತಿಕ ಜೀವನವನ್ನು ಸಂಪೂರ್ಣವಾಗಿ ಪತ್ರಿಕೆಗೆ ಅರ್ಪಿಸಿದವರು ಮತ್ತು ಕರ್ನಾಟಕ ವಿವಿ ಸ್ಥಾಪನೆಗೆ, ಬೆಳವಣಿಗೆಗೆ ಶ್ರಮಿಸಿದವರು ಎಂದರು.

ನಂತರ ವಿದ್ಯಾರ್ಥಿಗಳೊಂದಿಗೆ ಸಂವಾದದಲ್ಲಿ ಉತ್ತರಿಸಿದ ಅವರು, ಪತ್ರಿಕೋದ್ಯಮ ವಿದ್ಯಾರ್ಥಿಗಳು ಅಧ್ಯಯನಶೀಲರಾಗಬೇಕು. ಸಮಾಜದಲ್ಲಿ ತಮ್ಮ ಸುತ್ತ-ಮುತ್ತ ಇರುವ ಕುಂದು ಕೊರತೆಗಳ ಬಗ್ಗೆ ಪತ್ರಿಕೆಗಳಿಗೆ ಪತ್ರ, ಲೇಖನ ಬರೆಯುವುದನ್ನು ರೂಢಿಸಿಕೊಳ್ಳುವ ಮೂಲಕ ಪ್ರಬುದ್ಧ ಪತ್ರಕರ್ತರಾಗಿ ಹೊರಹೊಮ್ಮಲು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಷಣ್ಮುಖ ಕೋಳಿವಾಡ ದಂಪತಿಗಳನ್ನು ಶಾಲು ಹೊದೆಸಿ ಫಲಪುಷ್ಪ ನೀಡಿ ಸನ್ಮಾನಿಸಲಾಯಿತು. ಡಾ.ನಯನಾ ಗಂಗಧರಪ್ಪ ವೇದಿಕೆಯಲ್ಲಿದ್ದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ವಿಭಾಗದ ಮುಖ್ಯಸ್ಥ ಪ್ರೊ. ಜೆ.ಎಂ. ಚಂದುನವರ ಮಾತನಾಡಿ, ವಿದ್ಯಾರ್ಥಿಗಳು ಉನ್ನತ ವಿಚಾರಗಳನ್ನು ಇಟ್ಟುಕೊಂಡು ಕಠಿಣ ಪರಿಶ್ರಮದ ಮೂಲಕ ಸಾಧನೆ ಮಾಡಬೇಕು ಎಂದರು.

ಡಾ.ಸಂಜಯ ಕುಮಾರ ಮಾಲಗತ್ತಿ ಸ್ವಾಗತಿಸಿದರು. ಡಾ.ಶಕುಂತಲಾ ಸೊರಟೂರ, ಡಾ. ನಾಗರಾಜ ರೋಣದ, ಪತ್ರಕರ್ತರಾದ ಸುನಿಲ ಪಾಟೀಲ, ರವೀಶ ಪವಾರ, ಪ್ರೊ. ನೀಲಗುಂದ ಉಪಸ್ಥಿತರಿದ್ದರು. ಡಾ.ಮಂಜುನಾಥ ಅಡಿಗಲ್ ಕಾರ್ಯಕ್ರಮ ನಿರೂಪಿಸಿದರು.



ಶಾಸಕಾಂಗ, ನ್ಯಾಯಾಂಗ, ಕಾರ್ಯಾಂಗಗಳು ಸರಿಯಾದ ರೀತಿಯಲ್ಲಿ ನಡೆಯುವಂತೆ ವೈಫಲ್ಯಗಳನ್ನು ಎತ್ತಿ ತೋರಿಸುವ ಕಾರ್ಯವನ್ನು ಪತ್ರಿಕೆಗಳು ಮಾಡುತ್ತಿವೆ. ಪ್ರಾದೇಶಿಕ ಅಸಮಾನತೆ ಹಾಗೂ ಸರಕಾರದ ಅಭಿವೃದ್ಧಿ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಮೂಲಕ ಅಭಿವೃದ್ಧಿ ಪರ ಕೆಲಸ ಮಾಡುತ್ತಿವೆ ಎಂದು ಷಣ್ಮುಖ ಕೋಳಿವಾಡ ನುಡಿದರು.

## ರಂಗೋತ್ಸವ ಕಾರ್ಯಕ್ರಮ ಇಂದು




■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಗಂಗಾಪೂರ ಪೇಟೆಯಲ್ಲಿ ಸಮಸ್ತ ಹಿರಿಯರ ನೇತೃತ್ವದಲ್ಲಿ ಬಣ್ಣದ ಹಬ್ಬ ಹೋಳಿ ಆಚರಣೆಗಾಗಿ, ಕೋಮು ಸೌಹಾರ್ದತೆಯ ಸಂಕೇತವಾಗಿರುವ ಹೋಳಿ ಹಬ್ಬವನ್ನು ಸಂಭ್ರಮದಿಂದ ಆಚರಿಸುವ ಉದ್ದೇಶದಿಂದ ಮಳೆ ಡ್ಯಾನ್ಸ್, ವಿರಾಠ ಡಿಜೆ, ಪೂಲ್ ಡ್ಯಾನ್ಸ್, ರಂಗೋತ್ಸವ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಸಂಘಟಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ವತಿಯಿಂದ ಕಬ್ಬಿಗರ ಕೂಟದ ಸಾಹಿತ್ಯ ಭವನದಲ್ಲಿ ಹಮ್ಮಿಕೊಂಡಿದ್ದ, ವಿಶ್ವ ರಂಗಭೂಮಿ ದಿನಾಚರಣೆ ಕಾರ್ಯಕ್ರಮವನ್ನು ಕಬ್ಬಿಗರ ಕೂಟದ ಸಂಸ್ಥಾಪಕರು ಹಾಗೂ ಹಿರಿಯ ಸಾಹಿತಿಗಳಾದ ಡಿ.ವಿ. ಬಡಿಗೇರ ವಾದ್ಯಗಳನ್ನು ನುಡಿಸುವ ಮೂಲಕ ಉದ್ಘಾಟಿಸಿದರು. ವೇದಿಕೆಯಲ್ಲಿ ಪ್ರೊ. ಎಮ್.ಎಸ್. ಕುಲಕರ್ಣಿ, ಡಾ. ಜಿ.ಬಿ. ಪಾಟೀಲ, ಡಿ.ವಿ. ಬಡಿಗೇರ, ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ, ಶಂಕರಣ್ಣ ಸಂಕಣ್ಣವರ, ಸಾವಿತ್ರಾಬಾಯಿ ಲಮಾಣಿ ಉಪಸ್ಥಿತರಿದ್ದರು.

### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳು

# ಆರೋಗ್ಯಕರ ಜೀವನಶೈಲಿ ರೂಢಿಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಸ್ತುತ ದಿನಮಾನದ ಆಹಾರ, ಜೀವನಶೈಲಿಯಿಂದ ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿವೆ. ಹೃದಯಾಘಾತ, ರಕ್ತದ ಒತ್ತಡ, ಸಕ್ಕರೆ ಖಾಯಿಲೆ ಹೆಚ್ಚಾಗುತ್ತಿರುದಕ್ಕೆ ನಮ್ಮ ಜೀವನ ಶೈಲಿಯಲ್ಲಿನ ಬದಲಾವಣೆಗಳೇ ಕಾರಣ ಎಂದು ಡಾ. ತೋಂಟದ ಸಿದ್ಧರಾಮ ಶ್ರೀಗಳು ಹೇಳಿದರು.



ಲಿಂಗಾಯತ ಪ್ರಗತಿಶೀಲ ಸಂಘದ 2686ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿ, ದೈಹಿಕ ಶ್ರಮಗಳು ಕಡಿಮೆಯಾಗಿ, ಮಾನಸಿಕ ಒತ್ತಡಗಳು ಹೆಚ್ಚಾಗುತ್ತಿವೆ. ಇತ್ತೀಚೆಗೆ ಮನುಷ್ಯನ ಆಯುಷ್ಯ ಕೂಡ ಬಹಳಷ್ಟು ಕಡಿಮೆಯಾಗುತ್ತಿದೆ. ದುಶ್ಚಟಗಳನ್ನು ತ್ಯಜಿಸಿ ಆರೋಗ್ಯಕರ ಜೀವನಶೈಲಿ ರೂಢಿಸಿಕೊಳ್ಳಬೇಕು ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ 'ಕಿತ್ತೂರು ಚೆನ್ನಮ್ಮ' ಪ್ರಶಸ್ತಿ ಪಡೆದ ನಿಮಿತ್ತ ವಿ.ವಿ. ಹಿರೇಮಠರನ್ನು ಸಂಮಾನಿಸಲಾಯಿತು. ತಾಲೂಕಾ ಬಣಜಿಗರ ಸಮಾಜದ ಮಹಿಳಾ ಘಟಕದ ಅಧ್ಯಕ್ಷೆ ಲಲಿತಾ ಇಂಗಳಳ್ಳಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಬಣಜಿಗ ಮಹಿಳಾ ಘಟಕದ ಸದಸ್ಯರು ವಚನಸಂಗೀತ ಹಾಡಿದರು. ಧರ್ಮಗ್ರಂಥ ಪಠಣವನ್ನು ಸ್ನೇಹಾ ಬಳ್ಳೊಳ್ಳಿ, ವಚನ ಚಿಂತನೆಯನ್ನು ದೀಪಾ ಸುರೇಶ ನಿಲೂಗಲ್ ಮಾಡಿದರು. ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ವಹಿಸಿಕೊಂಡಿದ್ದ ಬಸವರಾಜ ರಾಮನಕೊಪ್ಪ ಹಾಗೂ ಬಣಜಿಗ ಮಹಿಳಾ ಸಮಾಜ ತಾಲೂಕಾ ಘಟಕ, ಗದಗ ಮತ್ತು ವ್ಯಾಪಾರೋದ್ಯಮಿ ಉಮೇಶ ಗಂಗಾಧರಪ್ಪ ನಾಲ್ವಾಡರನ್ನು ಪೂಜ್ಯರು ಸಂಮಾನಿಸಿದರು.

ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ.ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

ಹೆಸರಾಂತ ವೈದ್ಯ ಡಾ. ಗಣೇಶ ಕುಂದಾಪೂರ ಉಪನ್ಯಾಸ ನೀಡಿ, ಕ್ಯಾನ್ಸರ್‌ನ್ನು ಮೊದಲನೇ ಹಂತದಲ್ಲಿ ಪತ್ತೆ ಹಚ್ಚಿ ಸೂಕ್ತ ವೈದ್ಯಕೀಯ ಚಿಕಿತ್ಸೆ ಪಡೆಯಬೇಕು. ಕ್ಯಾನ್ಸರ್ ವಾಸಿಯಾಗುವುದು ಖಚಿತ. ಕ್ಯಾನ್ಸರ್ ರೋಗ ಎಂದ ತಕ್ಷಣ ಭಯಪಡಬಾರದು. ಸಿಗರೇಟ್, ಗುಟಕಾ, ಸೇವನೆಯಿಂದ ಕ್ಯಾನ್ಸರ್‌ಗೆ ಬಹಳಷ್ಟು ಜನ ತುತ್ತಾಗುತ್ತಿದ್ದಾರೆ. ಸಾಧ್ಯವಾದಷ್ಟು ದುಶ್ಚಟಗಳಿಂದ ದೂರವಿರಬೇಕು ಎಂದು ತಿಳಿಸಿದ ಅವರು, ಕ್ಯಾನ್ಸರ್ ಕುರಿತು ಅನೇಕ ಮಹತ್ವದ ಸಂಗತಿಗಳನ್ನು ಜನರಿಗೆ ತಿಳಿಸಿಕೊಟ್ಟರು.

## ಮತದಾರರ ಹೆಸರು ಸೇರ್ಪಡೆಗೆ ಏಪ್ರಿಲ್ 9ರವರೆಗೆ ಅವಕಾಶ

**■ವಿಜಯಸಾಕ್ಷಿ ಸುದ್ದಿ, ಗದಗ**

ಲೋಕಸಭಾ ಸಾರ್ವತ್ರಿಕ ಚುನಾವಣೆಗಳು 2024ನೇದ್ದಕ್ಕೆ ಸಂಬಂಧಿಸಿದಂತೆ ಭಾರತ ಚುನಾವಣಾ ಆಯೋಗವು ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಿಸಿರುತ್ತದೆ. ಜಿಲ್ಲೆಯಲ್ಲಿ ಈಗಾಗಲೇ ನಾಲ್ಕು ವಿಧಾನಸಭಾ ಕ್ಷೇತ್ರಗಳಾದ 65– ಶಿರಹಟ್ಟಿ, 66–ಗದಗ , 67– ರೋಣ ಹಾಗೂ 68 – ನರಗುಂದ ನೇದ್ದವುಗಳ ಅಂತಿಮ ಮತದಾರರ ಪಟ್ಟಿಯನ್ನು ಈಗಾಗಲೇ ಪ್ರಕಟಿಸಲಾಗಿದೆ. ಪ್ರತಿಯೊಬ್ಬ ಮತದಾರರು ಸದರಿ ಅಂತಿಮ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ನೋಂದಣಿಯಾಗಿರುವ ಬಗ್ಗೆ ಬಿ.ಎಲ್.ಓ, ಗಳ ಮುಖಾಂತರ, ಸಹಾಯಕ ಮತದಾರ ನೋಂದಣಾಧಿಕಾರಿ/ ಮತದಾರ ನೋಂದಣಾಧಿಕಾರಿ ಮುಖಾಂತರ, ವೋಟರ್ ಹೆಲ್ಪ್ ಲೈನ್ ಮೊಬೈಲ್ ಆಪ್ ಮುಖಾಂತರ, ಜಿಲ್ಲಾದಿಕಾರಿಗಳು, ಗದಗ ಇವರ ವೆಬ್‌ಸೈಟ್ https://ceo.karnataka.gov.in ಮುಖಾಂತರ ಖಚಿಪತಪಡಿಸಿಕೊಳ್ಳಬಹುದಾಗಿದೆ.

ಒಂದು ವೇಳೆ ಸದರಿ ಅಂತಿಮ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಸೇರ್ಪಡೆಯಾಗದೇ ಇದ್ದಲ್ಲಿ ಅಂತಿಮ ಮತದಾರರ ಪಟ್ಟಿಗೆ ಅರ್ಹ ಮತದಾರರು ತಮ್ಮ ಹೆಸರುಗಳನ್ನು ನೋಂದಾಯಿಸಲು ನಾಮಪತ್ರ ಸಲ್ಲಿಸುವ ಕೊನೆಯ ದಿನಾಂಕ 19–4–2024 ಕ್ಕೆ ಮುಂಚಿನ 10 ದಿನಗಳ ಪೂರ್ವದಲ್ಲಿ ಅಂದರೆ ಎಪ್ರಿಲ್ 9 ರೊಳಗೆ ನಿಗದಿತ ದಾಖಲೆಗಳೊಂದಿಗೆ ಹೆಸರು ಸೇರ್ಪಡೆಗೆ ಅರ್ಜಿಗಳನ್ನು ಸಲ್ಲಿಸಲು ಕಾಲಾವಕಾಶವಿರುತ್ತದೆ. ಸದರಿ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಯೋಜನೆಯ ಲಾಭ ಬಡವರಿಗೆ ದೊರಕಲಿ



**■ವಿಜಯಸಾಕ್ಷಿ ಸುದ್ದಿ, ರೋಣ**

ನರೇಗಾ ಯೋಜನೆಯಡಿ ಈ ಬಾರಿ ಸಮುದಾಯ ಕಾಮಗಾರಿಗಳನ್ನು ಸಮರ್ಪಕವಾಗಿ ಕಾರ್ಯರೂಪಕ್ಕೆ ತಂದು, ಗ್ರಾಮೀಣ ಪ್ರದೇಶಗಳ ಬಡ ಜನರಿಗೆ ನರೇಗಾ ಯೋಜನೆಯ ಲಾಭ ದೊರಕುವ ಹಾಗೆ ಮಾಡುವುದು ನಮ್ಮ ಕರ್ತವ್ಯ. ಅದಕ್ಕೆ ನಿಮ್ಮೆಲ್ಲರ ಸಹಕಾರ ಕೂಡ ಬಹಳ ಮುಖ್ಯ ಎಂದು ಅಸೂಟಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಸವರಾಜ ಗಿರಿತಿಮ್ಮಣ್ಣವರ ಹೇಳಿದರು.

ಅಸೂಟಿ ಗ್ರಾ.ಪಂನಲ್ಲಿ ನಡೆದ ಕಾಯಕ ಬಂಧುಗಳ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಏಪ್ರೀಲ್ 1ರಿಂದ ಅಸೂಟಿ ಗ್ರಾ.ಪಂನಲ್ಲಿ ನರೇಗಾ ಸಾಮೂಹಿಕ ಕಾಮಗಾರಿ ಆರಂಭವಾಗಲಿದ್ದು, ನರೇಗಾ ಕೆಲಸಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರನ್ನು ಸೇರಿಸುವ ಕೆಲಸವನ್ನು ತಾವು ಮಾಡಬೇಕು ಎಂದು ಹೇಳಿದರು.

ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ನರೇಗಾ ಯೋಜನೆ ಮಹತ್ವದ ಪಾತ್ರವಹಿಸಿದೆ. ಯೋಜನೆಯಡಿ ವಾರ್ಷಿಕವಾಗಿ 100 ದಿನಗಳವರೆಗೆ ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ಕೆಲಸ ಸಿಗುವಂತೆ ಆಗಬೇಕು. ಈ ಮೂಲಕ ಗ್ರಾಮೀಣ ಪ್ರದೇಶದ ಮೂಲಭೂತ ಸಮಸ್ಯೆಗಳನ್ನು ನಿವಾರಿಸಲು ನರೇಗಾ ವರದಾನವಾಗಲಿದೆ ಎಂದರು.

ಏಪ್ರಿಲ್ 1ರಿಂದ ನರೇಗಾ ಕೂಲಿಕಾರರಿಗೆ ದಿನವೊಂದಕ್ಕೆ 349 ರೂಪಾಯಿ ನಿಗದಿಪಡಿಸಲಾಗಿದೆ. ಬೇಸಿಗೆ ಅವಧಿಯ 100 ದಿನಗಳ ಕಾಲ ನರೇಗಾ ಯೋಜನೆಯಡಿ ಕೆಲಸ ಮಾಡಿದರೆ ಕೂಲಿಕಾರರಿಗೆ 34900 ರೂಪಾಯಿ ಸಿಗುತ್ತದೆ. ಕೂಲಿಕಾರರು ಯೋಜನೆಯಿಂದ ಬರುವ ಈ ಹಣವನ್ನು ಮುಂಗಾರಿನ ಕೃಷಿ ಬಿತ್ತನೆಯ ಕಾರ್ಯಕ್ಕೆ ಸದುಪಯೋಗ ಪಡಿಸಿಕೊಳ್ಳಲು ನೆರವಾಗುವುದು ಎಂದು ಅಭಿಪ್ರಾಯಪಟ್ಟರು.

ಬಿಎಫ್‌ಟಿ ಅಶೋಕ ಕಂಬಳಿ, ಕಾಯಕ ಮಿತ್ರರಾದ ಪವಿತ್ರಾ ನಾಡಗೌಡರ, ಕಾಯಕ ಬಂಧುಗಳು, ನರೇಗಾ ಹಾಗೂ ಗ್ರಾ.ಪಂ ಸಿಬ್ಬಂದಿಗಳು ಹಾಜರಿದ್ದರು.

## ದೆಹಲಿ ಅಬಕಾರಿ ನೀತಿ ಪ್ರಕರಣ: ಏಪ್ರಿಲ್ 1ರವರೆಗೆ ಅರವಿಂದ್ ಕೇಜ್ರಿವಾಲ್ ಇಡಿ ಕಸ್ಟಡಿಗೆ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಆಪಾದಿತ ಮದ್ಯ ನೀತಿ ಹಗರಣದಲ್ಲಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಜಾರಿ ನಿರ್ದೇಶನಾಲಯದ ಕಸ್ಟಡಿಯನ್ನು ಮತ್ತೆ ನಾಲ್ಕು ದಿನಗಳ ಕಾಲ ವಿಸ್ತರಿಸಲಾಗಿದೆ. ಏಪ್ರಿಲ್ 1 ರವರೆಗೆ ದೆಹಲಿ ಮುಖ್ಯಮಂತ್ರಿಗಳು ಕೇಂದ್ರೀಯ ತನಿಖಾ ಸಂಸ್ಥೆಯ ವಶದಲ್ಲಿರುತ್ತಾರೆ.

ಆರ್ಥಿಕ ಅಪರಾಧಗಳ ತನಿಖೆ ಮಾಡುವ ಜಾರಿ ನಿರ್ದೇಶನಾಲಯವು ಏಳು ದಿನಗಳ ಕಾಲ ವಶಕ್ಕೆ ನೀಡುವಂತೆ ನ್ಯಾಯಾಲಯದ ಮುಂದೆ ಮನವಿ ಮಾಡಿತ್ತು. ಗೋವಾ ಚುನಾವಣೆಯಲ್ಲಿ ಎಎಪಿ ಲಂಚದ ಹಣವನ್ನು ಬಳಸಿದೆ ಎಂದು ಸಾಬೀತುಪಡಿಸಲು ತನ್ನ ಬಳಿ ಪುರಾವೆಗಳಿವೆ ಎಂದು ಸಂಸ್ಥೆ ಹೇಳಿಕೊಂಡಿದೆ.

ಆದರೆ, ನ್ಯಾಯಾಲಯದ ಸಭಾಂಗಣವನ್ನು ನೇರವಾಗಿ ಉದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಳ್ ಇಡಿ ಆರೋಪ ಸುಳ್ಳು ಎಂದು ವಾದಿಸಿದ್ದಾರೆ. 'ಇಡಿ ತನ್ನ ಪಕ್ಷವನ್ನು ನಾಶ ಮಾಡಲು ಪ್ರಯತ್ನಿಸುತ್ತಿದೆ. ಯಾವುದೇ ನ್ಯಾಯಾಲಯವು ನನ್ನನ್ನು ಅಪರಾಧಿ ಎಂದು ಸಾಬೀತುಪಡಿಸಿಲ್ಲ' ಎಂದು ಅವರು ಹೇಳಿದರು. ಹಾಲಿ ಮುಖ್ಯಮಂತ್ರಿಯನ್ನು ಬಂಧಿಸಲು ಇಡಿ ನೀಡಿರುವ ಕಾರಣ ಕ್ಷುಲ್ಲಕ ಎಂದು ಅವರು ಟೀಕಿಸಿದರು.

ಕೇಜ್ರಿವಾಲ್ ವಿರುದ್ಧದ ಅರ್ಜಿ ವಜಾ: ಅರವಿಂದ್ ಕೇಜ್ರಿವಾಲ್ ಅವರನ್ನು ಮುಖ್ಯಮಂತ್ರಿ ಹುದ್ದೆಯಿಂದ ಕೆಳಗಿಳಿಸುವಂತೆ ಕೋರಿ ಸಲ್ಲಿಸಲಾಗಿದ್ದ ಅರ್ಜಿಯನ್ನು ದೆಹಲಿ ಹೈಕೋರ್ಟ್ ಇಂದು ವಜಾಗೊಳಿಸಿದೆ. ಮದ್ಯ ನೀತಿ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯದಿಂದ ಅರವಿಂದ್ ಕೇಜ್ರಿವಾಲ್ ಅವರನ್ನು ಬಂಧಿಸಿದ ನಂತರ ದೆಹಲಿ ಮುಖ್ಯಮಂತ್ರಿ ಸ್ಥಾನದಿಂದ ಅವರನ್ನು ವಜಾಗೊಳಿಸುವಂತೆ ಕೋರಿ ಸಲ್ಲಿಸಲಾದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು (ಪಿಐಎಲ್) ದೆಹಲಿ ಹೈಕೋರ್ಟ್ ಇಂದು ವಜಾಗೊಳಿಸಿದೆ.

## ಅಗ್ನಿಬನ್ನಿರಾಯ ಜಯಂತಿ ಆಚರಣೆ




**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗುರುವಾರ ಅಗ್ನಿಬನ್ನಿರಾಯ ಜಯಂತಿ ಅಂಗವಾಗಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಅಗ್ನಿಬನ್ನಿರಾಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಸುರೇಖಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಸೇರಿದಂತೆ ವಿನಾಯಕ ಭಾವಿಮನಿ ಹಾಜರಿದ್ದರು.

## ಸಾರ್ವಜನಿಕರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**


ಎಪ್ರಿಲ್ 1, 2024 ರಿಂದ ಕೊಪ್ಪಳದಲ್ಲಿ ನೂತನ ಅಂಚೆ ವಿಭಾಗೀಯ ಕಾರ್ಯಾಲಯವು ಚಾಲನೆಗೊಳ್ಳುತ್ತಿದ್ದು, ಪ್ರಸ್ತುತ ಗದಗ ಅಂಚೆ ವಿಭಾಗದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೊಪ್ಪಳ ಜಿಲ್ಲೆಯ ಕೊಪ್ಪಳ, ಕುಷ್ಟಗಿ, ಗಂಗಾವತಿ, ಕನಕಗಿರಿ, ಕಾರಟಗಿ, ಕುಕನೂರು, ಯಲಬುರ್ಗಾ ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಚೆ ಕಚೇರಿಗಳಲ್ಲಿ ತಾಂತ್ರಿಕ ಪೂರ್ವಸಿದ್ಧತೆಗಳಿಗಾಗಿ ದಿನಾಂಕ 30.03.2024 ರಂದು ಬಟವಾಡೆಯನ್ನು ಹೊರತುಪಡಿಸಿ ಯಾವುದೇ ರೀತಿಯ ಅಂಚೆ ಸೇವೆಗಳು ಲಭ್ಯವಿರುವುದಿಲ್ಲ, ಸಾರ್ವಜನಿಕರು ಸಹಕರಿಸಬೇಕೆಂದು ಗದಗ ವಿಭಾಗದ ಅಂಚೆ ಅಧೀಕ್ಷಕರಾದ ಎನ್.ಜಿ.ಭಂಗಿಗೌಡರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಡಿಸಿ ದಿವ್ಯ ಪ್ರಭು

# ಅಧಿಕಾರಿಗಳು ರೈತರಿಗೆ ಭರವಸೆ ತುಂಬಿ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಅಧಿಕಾರಿಗಳು ಕ್ರಿಯಾಶೀಲರಾಗಿ, ಬರ ಪರಿಸ್ಥಿತಿಯ ಬಗ್ಗೆ ನಿಗಾ ವಹಿಸಿದ್ದು, ಯಾವುದೇ ಗ್ರಾಮ, ಪಟ್ಟಣಗಳಿಗೆ ಕುಡಿಯುವ ನೀರಿನ ಕೊರತೆ ಅಥವಾ ಜಾನುವಾರುಗಳಿಗೆ ಮೇವು ಪೂರೈಕೆಯಲ್ಲಿ ವ್ಯತ್ಯಯವಾಗಿಲ್ಲ, ಮುಂದಿನ ದಿನಗಳಲ್ಲಿಯೂ ಅಧಿಕಾರಿಗಳು ಈ ಕುರಿತು ಮುನ್ನೆಚ್ಚರಿಕೆ ವಹಿಸಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.



ಅವರು ಗುರುವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ಜರುಗಿಸಿ, ಬರ ಪರಿಹಾರ ಕಾರ್ಯಗಳ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದರು.

ಜಿಲ್ಲೆಯಲ್ಲಿ ಜೂನ್‌ವರೆಗೆ ಅಗತ್ಯವಿರುವಷ್ಟು ಮೇವು ದಾಸ್ತಾನು ಇದೆ. ರೈತರು ಸಹ ಮೇವು ಬಣವೆ ಹೊಂದಿದ್ದಾರೆ. ಆದರೂ ರೈತರಿಗೆ ಸರಕಾರದ ನೆರವು, ಜಿಲ್ಲಾಡಳಿತ ನಿಮ್ಮೊಂದಿಗೆ ಇದೆ ಎಂಬುದನ್ನು ಮನವರಿಕೆ ಮಾಡಲಾಗಿದೆ. ಕೃಷಿ ಭೂಮಿ ರಹಿತರು ಮತ್ತು ಹೈನುಗಾರಿಕೆ ಮಾಡುವವರಿಗೂ ಅನುಕೂಲವಾಗಲೆಂದು ಜಿಲ್ಲೆಯ ವಿವಿಧೆಡೆ ಬೇಡಿಕೆಗೆ ಅನುಗುಣವಾಗಿ ಆರು ಸ್ಥಳಗಳಲ್ಲಿ ಮೇವು ಬ್ಯಾಂಕುಗಳನ್ನು ತೆರೆಯಲಾಗಿದೆ. ರೈತರಿಗೆ ಈ ಕುರಿತು ಮಾಹಿತಿ ನೀಡಿದ್ದು, ರೈತರು ಅಗತ್ಯವಿದ್ದಾಗ ಮೇವು ಬ್ಯಾಂಕಿನಿಂದ ನಿಯಮಾನುಸಾರ ಮೇವು ಪಡೆಯಬಹುದಾಗಿದೆ ಎಂದು ಅವರು ಹೇಳಿದರು.

ಬರಗಾಲದ ಹಿನ್ನೆಲೆಯಲ್ಲಿ ನರೇಗಾ ಕೂಲಿ ನೀಡುವಾಗ 'ಒಂದು ಗ್ರಾಮ ಒಂದು ಕೆರೆ ಯೋಜನೆ' ಮಾಡಿಕೊಂಡು ಆಯಾ ಗ್ರಾಮದ ಎಲ್ಲಾ ನರೇಗಾ ಕೂಲಿ ಕಾರ್ಮಿಕರಿಂದ ಅವರದ್ದೇ ಊರಿನ ಒಂದು ಕೆರೆಯನ್ನು ಸಮಗ್ರ ಅಭಿವೃದ್ಧಿ ಮಾಡಿ ಎಂದು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಜಿ.ಪಂ ಉಪ ಕಾರ್ಯದರ್ಶಿ ವಿಜಯಕುಮಾರ ಆಜೂರ, ಮಹಾನಗರ ಪಾಲಿಕೆ ಅಧೀಕ್ಷಕ ಅಭಿಯಂತರ ತಿಮ್ಮಪ್ಪ, ಪಶುಪಾಲನೆ ಮತ್ತು ಪಶು ವೈದ್ಯಕೀಯ ಇಲಾಖೆ ಉಪನಿರ್ದೇಶಕ ಡಾ. ರವಿ ಸಾಲಿಗೌಡರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರಮೇಶ ಬಿ.ಎಸ್., ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ. ಕಿರಣಕುಮಾರ ಸೇರಿದಂತೆ ಎಲ್ಲಾ ತಾಲೂಕುಗಳ ತಹಸೀಲ್ದಾರರು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಪಶುಪಾಲನೆ ಇಲಾಖೆ ಸಹಾಯಕ ನಿರ್ದೇಶಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

## ನೂತನ ಅಕಾಡೆಮಿ ಸದಸ್ಯರಿಗೆ ಸನ್ಮಾನ




**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ವತಿಯಿಂದ ಕಬ್ಬಿಗರ ಕೂಟದ ಸಾಹಿತ್ಯ ಭವನದಲ್ಲಿ ಹಮ್ಮಿಕೊಂಡಿದ್ದ, ವಿಶ್ವ ರಂಗಭೂಮಿ ದಿನಾಚರಣೆ ಕಾರ್ಯಕ್ರಮದಲ್ಲಿ ಕರ್ನಾಟಕ ಜಾನಪದ ಅಕಾಡೆಮಿಗೆ ಸದಸ್ಯರಾಗಿ ನೇಮಕ ಹೊಂದಿರುವ ಜಿಲ್ಲೆಯ ಹಿರಿಯ ಜಾನಪದ ಕಲಾವಿದ ಶಂಕರಣ್ಣ ಸಂಕಣ್ಣವರ ಹಾಗೂ ಕರ್ನಾಟಕ ಬಂಜಾರ ಅಕಾಡೆಮಿಗೆ ಸದಸ್ಯರಾಗಿ ನೇಮಕಗೊಂಡ ಜಾನಪದ ಕಲಾವಿದೆ ಸಾವಿತ್ರಿಬಾಯಿ ಲಮಾಣಿ ಅವರನ್ನು ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಹಾಗೂ ಕಲಾ ಚೇತನ ಅಕಾಡೆಮಿ ವತಿಯಿಂದ ಸನ್ಮಾನಿಸಲಾಯಿತು.

ವೇದಿಕೆಯಲ್ಲಿ ಪ್ರೊ. ಎಮ್.ಎಸ್. ಕುಲಕರ್ಣಿ, ಡಾ. ಜಿ.ಬಿ. ಪಾಟೀಲ, ಡಿ.ವಿ. ಬಡಿಗೇರ, ಫಣೀಂದ್ರಾಚಾರ್ಯ ದ್ಯಾಮೇನಹಳ್ಳಿ, ಕಾವೆಂ ಶ್ರೀನಿವಾಸ, ಶಂಕರಣ್ಣ ಸಂಕಣ್ಣವರ, ಸಾವಿತ್ರಬಾಯಿ ಲಮಾಣಿ, ವಿಶ್ವನಾಥ ನಾಲವಾಡದ ಉಪಸ್ಥಿತರಿದ್ದರು.

## ಸರ್ವತೋಮುಖ ವ್ಯಕ್ತಿತ್ವ ವಿಕಾಸ ಶಿಬಿರ

**■ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ಈ ನಾಡಿನ ಭಾವೀ ಪ್ರಜೆಗಳಾದ ಮಕ್ಕಳು ಗುಣಾತ್ಮಕವಾಗಿ ವಿಕಾಸ ಹೊಂದಬೇಕೆಂಬ ಉದ್ದೇಶದಿಂದ 12ರಿಂದ 16 ವರ್ಷ ವಯೋಮಾನದ ಮಕ್ಕಳಿಗೆ ಸೃಜನಾತ್ಮಕವಾಗಿ ಮತ್ತು ರಚನಾತ್ಮಕವಾಗಿ ವ್ಯಕ್ತಿತ್ವದ ವಿಕಾಸ ಮಾಡಲು ಏಪ್ರಿಲ್ 1ರಿಂದ 10ರವರೆಗೆ ಶಿಬಿರವನ್ನು ಹುಲಕೋಟಿ ಪ್ರಜಾಪಿತ ಬ್ರಹ್ಮಕುಮಾರೀಸ್ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಬೆಳಿಗ್ಗೆ 10 ಗಂಟೆಯಿಂದ ಮದ್ಯಾಹ್ನ 1 ಗಂಟೆಯವರೆಗೆ ಏರ್ಪಡಿಸಲಾಗಿದೆ.

ನೈತಿಕ ಮತ್ತು ಮೌಲ್ಯ ಶಿಕ್ಷಣ, ವರ್ತನೆಯಲ್ಲಿ ಪರಿವರ್ತನೆ, ಆದ್ಯಾತ್ಮಕತೆ, ಆರೋಗ್ಯಜ್ಞಾನ, ಶ್ಲೋಕ ವಚನ ಗೀತ ಪಠಣ, ರಾಜಯೋಗ, ಯೋಗಾಸನ, ಪ್ರಾಣಾಯಾಮ, ಕ್ರಾಫ್ಟ್, ಚಿತ್ರಕಲೆ, ಬೌದ್ಧಿಕ ಆಟಗಳು, ಪ್ರೊಜೆಕ್ಟರ್ ಶೋ ಮುಂತಾದ ಚಟುವಟಿಕೆಗಳನ್ನು ನಡೆಸಲಾಗುವದು. ಪೂರ್ಣ ಪ್ರಮಾಣದಲ್ಲಿ ಹಾಜರಾದವರಿಗೆ ಪ್ರಮಾಣ ಪತ್ರ ಕೊಡಮಾಡಲಾಗುವದು.

ಆಸಕ್ತರು ತಮ್ಮ ಹೆಸರನ್ನು ಮಾರ್ಚ್ 31ರ ಒಳಗಾಗಿ 9483903062 ಹಾಗೂ 6364312504 ಸಂಖ್ಯೆಯನ್ನು ಸಂಪರ್ಕಿಸಿ ನೊಂದಾಯಿಸಿಕೊಳ್ಳಬೇಕು ಎಂದು ಪ್ರಕಟಣೆ ತಿಳಿಸಿದೆ.

### ಗಾಳಿ ವಿದ್ಯುತ್ ಉತ್ಪಾದನಾ ಕಂಪನಿಗಳಿಂದ ರಸ್ತೆಗಳು ಹಾಳು

# ಗ್ರಾಮಸ್ಥರಿಂದ ತಹಸೀಲ್ದಾರರಿಗೆ ಮನವಿ

**■ವಿಜಯಸಾಕ್ಷಿ ಸುದ್ದಿ, ರೋಣ**

ತಾಲೂಕಿನ ಜಕ್ಕಲಿ ಗ್ರಾಮದಲ್ಲಿ ಗಾಳಿ ವಿದ್ಯುತ್ ಉತ್ಪಾದನಾ ಕಂಪನಿಗಳ ಬೃಹತ್ ವಾಹನಗಳ ಓಡಾಟದಿಂದ ರಸ್ತೆಗಳು ಸಂಪೂರ್ಣ ಹಾಳಾಗಿದ್ದು, ಕೂಡಲೇ ವಾಹನ ಸಂಚಾರವನ್ನು ನಿಷೇಧಿಸಬೇಕು ಎಂದು ಆಗ್ರಹಿಸಿ ಗ್ರಾಮಸ್ಥರು ಗುರುವಾರ ತಹಸೀಲ್ದಾರ ಕೆ.ನಾಗರಾಜರವರಿಗೆ ಮನವಿ ಸಲ್ಲಿಸಿದರು.



ರೋಣ ಮಂಡಲ ಬಿಜೆಪಿ ಘಟಕದ ಅಧ್ಯಕ್ಷ ಮುತ್ತಣ್ಣ ಕಡಗದ ಮಾತನಾಡಿ, ಈ ಹಿಂದೆ ಕೋಟ್ಯಾಂತರ ರೂ.ಗಳ ವೆಚ್ಚದಲ್ಲಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳನ್ನು ನಿರ್ಮಿಸಲಾಗಿದೆ. ವಿಪರ್ಯಾಸವೆಂದರೆ, ಗಾಳಿ ವಿದ್ಯುತ್ ಉತ್ಪಾದನಾ ಕಂಪನಿಗಳ ಬೃಹತ್ ಗಾತ್ರದ ವಾಹನಗಳ ಓಡಾಟದಿಂದ ರಸ್ತೆಗಳು ಕಿತ್ತು ಹೋಗಿದ್ದು, ಸಂಚಾರ ಸಾಧ್ಯವಾಗದ ಸ್ಥಿತಿ ಉದ್ಭವಿಸಿದೆ. ಈ ಕೂಡಲೇ ವಾಹನ ಸಂಚಾರವನ್ನು ನಿಷೇಧಿಸಬೇಕು ಎಂದು ಆಗ್ರಹಿಸಿದರು.

ಎ.ಎ. ಹೊಸಮನಿ ಮಾತನಾಡಿ, ಗ್ರಾಮದ ರಸ್ತೆಗಳು ಹಾಳಾಗುತ್ತಿರುವ ಬಗ್ಗೆ ಈಗಾಗಲೇ ಸಾಕಷ್ಟು ಬಾರಿ ಅಧಿಕಾರಿಗಳಿಗೆ ತಿಳಿಸಿದರೂ ಸಹ ಗಮನ ಹರಿಸುತ್ತಿಲ್ಲ. ಸುಮಾರು 60ರಿಂದ 70 ಚಕ್ರಗಳನ್ನು ಹೊಂದಿರುವ ವಾಹನಗಳು ಸಂಚಾರ ಮಾಡುತ್ತಿವೆ. ಜೊತೆಗೆ ಧೂಳು ಏಳುತ್ತಿದ್ದು, ಅಸಹನೀಯವಾಗಿದೆ. ಇದರಿಂದ ಗ್ರಾಮಸ್ಥರು ಭಯ ಬೀಳುವಂತಾಗಿದ್ದು, ಕೂಡಲೇ ಕಂಪನಿಗಳ ವಾಹನಗಳನ್ನು ಗ್ರಾಮ ಪ್ರವೇಶಿಸದಂತೆ ತಡೆ ಹಿಡಿಯಬೇಕು. ಇಲ್ಲದಿದ್ದರೆ ಹೋರಾಟ ಅನಿವಾರ್ಯವಾಗಲಿದೆ ಎಂದರು.

ಮನವಿ ಸ್ವೀಕರಿಸಿ, ಜಿಲ್ಲಾಧಿಕಾರಿಗಳ ಗಮನಕ್ಕೆ ಈ ವಿಷಯವನ್ನು ತರಲಾಗುವುದು ಎಂದು ತಹಸೀಲ್ದಾರ ಕೆ.ನಾಗರಾಜ ತಿಳಿಸಿದರು. ಆದಂಸಾಬ ಬಾಲೆಸಾಬನವರ, ಶೇಖಪ್ಪ ಮಾರನಬಸರಿ, ಶಿವಪ್ಪ ಕೆಳಗಡೆ, ಅಂದಪ್ಪ ಹಾಳಕೇರಿ ಸೇರಿದಂತೆ ಅನೇಕರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka